MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 221 | ಮಂಗಳವಾರ : 17-06-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 221 | TUESDAY : 17-06-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಜಿಲ್ಲಾ ಮುಖ್ಯ ರಸ್ತೆಗಳ ಅಗಲೀಕರಣಕ್ಕೆ ಅನುದಾನ: ಸತೀಶ್ ಜಾರಕಿಹೊಳಿ



**ಯುವ ಮಾರ್ಗ ಸುದ್ದಿ**

**ರಾಯಚೂರು,ಜೂ.16–** ಮೇಲ್ದರ್ಜೆಗೇರಿಸಿದ ಜಿಲ್ಲಾ ಮುಖ್ಯ ರಸ್ತೆಗಳ ಅಗಲೀಕರಣಕ್ಕೆ ಅನುದಾನ ನೀಡಲಾಗುವುದು ಎಂದು ಲೋಕೋಪಯೋಗಿ ಸಚಿವರಾದ ಸತೀಶ ಜಾರಕಿಹೊಳಿ ಅವರು ಹೇಳಿದರು.

ರಾಯಚೂರ ಜಿಲ್ಲಾ ಪ್ರವಾಸದಲ್ಲಿದ್ದ ಸಚಿವರು ನೂತನ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಸಭಾಂಗಣದಲ್ಲಿ ಲೋ ಕೋಪಯೋಗಿ ಇಲಾಖೆಗೆ ಸಂಬಂಧಿಸಿದ ಕಾಮಗಾರಿ ಗಳ ಆರ್ಥಿಕ ಮತ್ತು ಭೌತಿಕ ಪ್ರಗತಿ ಪರಿಶೀಲನೆ ನಡೆಸಿ ಅವರು ಮಾತನಾಡಿದರು.

ದೇಶದ ಸಮಗ್ರ ಅಭಿವೃದ್ಧಿಯು ಸುಗಮ ಸಂಚಾರದ ವ್ಯವಸ್ಥೆಯನ್ನು ಸಹ ಅಲಂಭಿಸಿರುತ್ತದೆ. ಈ ನಿಟ್ಟಿನಲ್ಲಿ ರಸ್ತೆ ನಿರ್ವಹಣೆಗೆ ಬೇಕಾಗುವಷ್ಟು ಅನುದಾನ ನೀಡುವುದಾಗಿ ಸಚಿವರು ತಿಳಿಸಿದರು.

ರಾಯಚೂರ ಜಿಲ್ಲೆಯಲ್ಲಿನ ಬೇರೆ ಬೇರೆ ರಾಷ್ಟ್ರೀಯ ಹೆದ್ದಾರಿಗಳ ಬಗ್ಗೆ ಸಚಿವರು ಇದೆ ವೇಳೆ ಪರಿಶೀಲಿಸಿದರು.

ಸದ್ಯ ರಾಯಚೂರ ಜಿಲ್ಲೆಯ ಮಹತ್ವದ ಬೆಳಗಾವಿ-ರಾಯಚೂರ ರಾಷ್ಟ್ರೀಯ ಹೆದ್ದಾರಿಯ ಕಾಮಗಾರಿಗೆ ವೇಗ ನೀಡಬೇಕು ಎಂದು ಇದೆ ವೇಳೆ ಸಂಬಂಧಿಸಿದ ಗುತ್ತಿಗೆದಾರರಿಗೆ ಸಚಿವರು ನಿರ್ದೇಶನ ನೀಡಿದರು. ಇದಕ್ಕೆ ಬೇಕಾಗುವ ಮಷಿನರಿ, ಮಾನವ ಸಂಪನ್ಮೂಲದ ವ್ಯವಸ್ಥೆ ಮಾಡಿಕೊಳ್ಳಬೇಕು ಎಂದು ಸಚಿವರು ಸೂಚನೆ ನೀಡಿದರು.

ಬರೀ ಜಿಲ್ಲಾ ಕೇಂದ್ರದ ರಸ್ತೆಗಳು ಸುಧಾರಣೆಯಾದರಷ್ಟೇ ಸಾಲದು ಜಿಲ್ಲೆಯ ಎಲ್ಲ ತಾಲೂಕಿನ, ಎಲ್ಲ ಹೋಬಳಿಗಳ, ಗ್ರಾಮಗಳ ರಸ್ತೆಗಳು ಸಹ ಸಂಚಾರಿ ಸ್ನೇಹಿಯಾಗಿರಬೇಕು. ಈ ನಿಟ್ಟಿನಲ್ಲಿ ಆಯಾ ವಿಧಾನ ಸಭಾ ಕ್ಷೇತ್ರಗಳ ಶಾಸಕರು ತಮ್ಮ ತಮ್ಮ ಕ್ಷೇತ್ರಗಳಲ್ಲಿನ ಲೋಕೋಪಯೋಗಿ ಇಲಾಖೆಯ ಸಹಾಯಕ ಅಭಿಯಂತ ರೊಂದಿಗೆ ಪ್ರತಿ ತಿಂಗಳಿಗೊಮ್ಮೆ ನಿಯಮಿತವಾಗಿ ಸಭೆ ನಡೆಸಿ ರಸ್ತೆ ನಿರ್ಮಾಣ, ದುರಸ್ತಿ, ನಿರ್ವಹಣೆಯ ಬಗ್ಗೆ ಪರಿಶೀಲಿಸಬೇಕು ಎಂದು ಸಲಹೆ ಮಾಡಿದರು.

ಸಣ್ಣ ನೀರಾವರಿ, ವಿಜ್ಞಾನ ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಮಾತನಾಡಿ, ಜಿಲ್ಲೆಯಲ್ಲಿನ ವಿವಿಧ ಹೆದ್ದಾರಿಗಳ ನಿರ್ಮಾಣ ಕಾರ್ಯವು ನಿಧಾನಗತಿಯಲ್ಲಿದೆ. ಅಲ್ಲಿಂದ ಬರುವ ಧೂಳು, ತಗ್ಗು ದಿನ್ನೆಗಳಿಂದ ಶಾಲಾ-ಕಾಲೇಜು ವಿದ್ಯಾರ್ಥಿಗಳು, ಮಹಿಳೆಯರು, ಮಕ್ಕಳು ಸೇರಿದಂತೆ ಸಾರ್ವಜನಿಕರಿಗೆ ತೊಂದೆಯಾಗುತ್ತಿದೆ ಎಂದು ತಿಳಿಸಿದರು. 2ನೇ ಪುಟಕ್ಕೆ

## ತಾಲೂಕಿಗೆ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ



**ಯುವ ಮಾರ್ಗ ಸುದ್ದಿ**

**ಮಾನ್ವಿ,ಜೂ.16–** ಪಟ್ಟಣದ ಪ್ರವಾಸಿ ಮಂದಿರದಲ್ಲಿ ರಾಜ್ಯ ಲೋಕೋಪಯೊಗಿ ಇಲಾಖೆಯ ಸಚಿವರಾದ ಸತೀಶ್ ಜಾರಕಿಹೊಳ್ಳಿ ಯವರು ತಾಲೂಕಿನ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರೊಂದಿಗೆ ಭೇಟಿ ಮಾಡಿ ದರು ನಂತರ ಮಾತನಾಡಿದ ಅವರು ರಾಯಚೂರಿನಲ್ಲಿ ಇಂದು ಜಿಲ್ಲೆಯಲ್ಲಿ ಲೋಕೋಪಯೊಗಿ ಇಲಾಖೆಯುವತಿಯಿಂದ ಕೈಗೊಂಡಿರುವ ಕಾಮಗಾರಿಗಳ ಪ್ರಗತಿಯ ಬಗ್ಗೆ ಇಲಾಖೆಯ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿ ಎಲ್ಲಾ ಕಾಮಗಾರಿಗಳನ್ನು ಗುಣಮಟ್ಟದಲ್ಲಿ ಕಾಲಮಿತಿಯೊಳಗೆ ಪೂರ್ಣಗೊಳಿಸುವಂತೆ ಸೂಚನೆ ನೀಡಲಾಗಿದೆ ಹಾಗೂ ಜಿಲ್ಲೆಯ ವಿವಿಧ ತಾಲೂಕುಗಳ ಶಾಸಕರೊಂದಿಗೆ ತಮ್ಮ ಕ್ಷೇತ್ರಕ್ಕೆ ಅಗತ್ಯವಿರುವ ಕಾಮಗಾರಿಗಳ ಬಗ್ಗೆ ಸವಿಸ್ತಾರವಾಗಿ ಚರ್ಚೆ ನಡೆಸಲಾಯಿತು. ಮಾನ್ವಿ ತಾಲೂಕಿನ ಜನರ ಬೇಡಿಕೆಯಂತೆ ಉಟಕನೂರು-ದೋತ್ತರ ಬಂಡಿ ಸೇತುವೆ ನಿರ್ಮಾಣಕ್ಕೆ 10 ಕೋಟಿ ಅನುದಾನ ನೀಡಲಾಗಿದ್ದೆ ಹಾಗೂ ರಾಯಚೂರು, ಮಾನ್ವಿ ,ಸಿಂಧನೂರು ತಾಲೂಕುಗಳ ಜನರಿಗೆ ಸಂಚಾರಕ್ಕೆ ಅನುಕೂಲವಾಗುವಂತೆ ಸುಮಾರು 78.45 ಕಿ.ಮೀ ಉದ್ದದ ಚತುಷ್ಪಥ ರಸ್ತೆ ನಿರ್ಮಾಣಕ್ಕೆ 1,695. 85 ಕೋಟಿ ಅನುದಾನ ನೀಡಲಾಗಿದ್ದು ರಸ್ತೆ ಕಾಮಗಾರಿ ಪ್ರಗತಿಯಲ್ಲಿದೆ ಎಂದು ತಿಳಿಸಿದರು.

ಮಸ್ಕಿ ಶಾಸಕ ಬಸವನಗೌಡ ತುರ್ವಿಹಾಳ್, ಸಿಂಧನೂರು ಶಾಸಕ ಹಂಪನಗೌಡ ಬಾದರ್ಲಿ ,ಮುಖಂಡರಾದ ರವಿಬೋಸರಾಜು,ತಾಲೂಕು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಅಬ್ದುಲ್ ಗಫೂರ್ ಸಾಬ್, ರಾಜಾ ಸುಭಾಷಚಂದ್ರನಾಯಕ ಮಹಂತೇಶಸ್ವಾಮಿ ರೌಡೂರು ಸೇರಿದಂತೆ ಇನ್ನಿತರರು ಇದ್ದರು.

## ಟೋಲ್ ಗೇಟ್‌ಗಳನ್ನು ತೆರವಿಗೆ ಆಗ್ರಹಿಸಿ ವಿವಿಧ ಸಂಘಟನೆಗಳಿಂದ ಬೃಹತ್ ಪ್ರತಿಭಟನೆ



**ಯುವ ಮಾರ್ಗ ಸುದ್ದಿ**

**ದೇವದುರ್ಗ,ಜೂ.16–** ಸಮೀಪದ ಜಾಲಹಳ್ಳಿ ಗ್ರಾಮದ ಅಂಬೇಡ್ಕರ್ ಸರ್ಕಲ್ ಬಳಿ ಟೋಲ್ ಗೇಟ್ ವಿರೋಧಿ ಸಮಿತಿ ಹಾಗೂ ಪ್ರಗತಿಪರ ಸಂಘಟನೆಗಳ ಒಕ್ಕೂಟ ನೇತೃತ್ವದಲ್ಲಿ ಕಲ್ಮಲಾ-ತಿಂಥಣಿ ಬ್ರಿಜ್-ರಾಜ್ಯ ಹೆದ್ದಾರಿಯ ಮಧ್ಯೆ ಇರುವ ಟೋಲ್ ಗೇಟ್‌ಗಳನ್ನು ತೆರವು ಮಾಡುವಂತೆ ಆಗ್ರಹಿಸಿ ಸೋಮವಾರ ಬೃಹತ್ ಪ್ರತಿಭಟನೆ ನಡೆಸಿದರು.

ಪ್ರವಾಸಿ ಮಂದಿರದಿಂದ ರಾಲಿ ನಡೆಸಿ ಬಸವೇಶ್ವರ ಸರ್ಕಲ್ ಮೂಲಕ ಅಂಬೇಡ್ಕರ್ ಸರ್ಕಲ್ ಬಳಿ ಹೋಗಿ ಪ್ರತಿಭಟನಾಕಾರರು ಪ್ರತಿಭಟನೆ ನಡೆಸಿದರು.

ತಾಲೂಕಿನಲ್ಲಿ ಎರಡು ಕಡೆ ಜಾಲಹಳ್ಳಿ ಮತ್ತು ಕಾಕರಗಲ್ ಹತ್ತಿರ ಅವೈಜ್ಞಾನಿಕವಾಗಿ ಟೋಲ್ ಗೇಟ್ ನಿರ್ಮಿಸಿರುವುದು ಬಡವರ ಜೇಬಿಗೆ ಕತ್ತರಿ ಹಾಕುಲು ಸರ್ಕಾರ ಮುಂದಾಗಿದ್ದು ,ಸರಿ ಅಲ್ಲ ಕೂಡಲೇ ಟೋಲ್ ಗೇಟ್‌ಗನ್ನು ನಿಲ್ಲಿಸಬೇಕು ಎಂದು ಒತ್ತಾಯಿಸಿದರು.

ತಾಲೂಕಿನಲ್ಲಿ ಬಡ ರೈತರು ಬೆಳೆದ ಬೆಳೆಗೆ ನಿರೀಕ್ಷಿತ ಬೆಲೆ ಸಿಗುತ್ತಿಲ್ಲ. ರೈತರಿಗೆ ಹಾಗೂ ಕೃಷಿ ಕೂಲಿಕಾರರ ಕುಟುಂಬಗಳಿಗೆ ಟೋಲ್ ಗೇಟ್ ಕರವಸೂಲಿ ಹೊರೆಯಾಗುತ್ತಿದ್ದು ಟೋಲ್ ಗೇಟ್ ಗೆ ಹಣ ಪಾವತಿಸುವ ವಾಹನ ಮಾಲೀಕರು ಹಾಗೂ ಸರ್ಕಾರಿ ಬಸ್‌ಗಳಲ್ಲಿ ತೆರಿಗೆಯ ಹೊರೆಯನ್ನು ಪ್ರಯಾಣಿಕರಿಗೆ, ಬಡವರ ಮೇಲೆ ಹಾಕಲಾಗುತ್ತದೆ. ಇದರಿಂದ ಸಾರ್ವಜನರಿಕರ ಮೇಲೆ ಆರ್ಥಿಕ ಹೊರೆ ಬಿಳುತ್ತದೆ. ತಾಲೂಕಿನಲ್ಲಿ ಯಾವುದೇ ದೊಡ್ಡ ಪ್ರಮಾಣದ. ಕೈಗಾರಿಕೆಗಳಾಗಲಿ, ದೊಡ್ಡ ಉದ್ದಿಮೆಗಳಾಗಲಿ ಇರುವುದಿಲ್ಲ, ಟ್ರಾನ್ಸಪೋರ್ಟ ಗೂಡ್ಸ್ ವಾಹನಗಳ ಓಡಾಟವು ತೀರಾ ಕಡಿಮೆ ಇರುತ್ತದೆ. ಕೇವಲ ತಾಲೂಕಿನ ಗ್ರಾಮೀಣ ಪ್ರದೇಶದ ಸ್ಥಳಿಯ ವಾಹನಗಳು ಮಾತ್ರ ಈ ರಸ್ತೆಯಲ್ಲಿ ಓಡಾಟ ಮಾಡಲಾಗುತ್ತದೆ. ಆದರೆ, ಕಲ್ಮಲಾ-ತಿಂಥಣಿ ಬ್ರಿಜ್ ರಾಜ್ಯ ಹೆದ್ದಾರಿ 73 ಕಿ.ಮೀ ವ್ಯಾಪ್ತಿಯಿದೆ. ಕೇವಲ 73 ಕಿ.ಮೀ ವ್ಯಾಪ್ತಿಯಲ್ಲೇ ಎರಡು ಟೋಲ್ ಗೇಟ್ ನಿರ್ಮಿಸಲಾಗಿದೆ. ಕೇವಲ 40 ಕಿ.ಮೀ ಅಂತರದಲ್ಲಿ ಎರಡೆರಡು ಟೋಲ್ ಗೇಟ್ ಗಳನ್ನು ಅಳವಡಿಸಿ ಅಕ್ರಮವಾಗಿ ಹಣ ವಸೂಲಿ ಮಾಡುವ ಕುತಂತ್ರ ಅಡಗಿದೆ. ತಕ್ಷಣ ಟೋಲ್ ಗೇಟ್‌ಗಳನ್ನು ರದ್ದುಪಡಿಸಬೇಕು ಒಂದು ವೇಳೆ ಸರಕಾರ ಗಮನ ಹರಿಸದಿದ್ದರೆ ಇನ್ನಷ್ಟು ಉಗ್ರವಾದ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಟೋಲ್ ಗೇಟ್ ವಿರೋಧಿ ಸಮಿತಿ ಗೌರವಾಧ್ಯಕ್ಷ ರಂಗಣ್ಣ ಕೋಲ್ಕರ್. ಅಧ್ಯಕ್ಷ ನರಸಣ್ಣ ನಾಯಕ, ಕಾರ್ಯದರ್ಶಿ ಮಹಾಲಿಂಗ ದೊಡ್ಡಮನಿ. ಸಾಬಣ್ಣ ಕಮಲದಿನ್ನಿ, ಶಿವನಗೌಡ ನಾಯಕ ವಂದಲಿ. ಕರವೇ ಅಧ್ಯಕ್ಷ ನಂದಪ್ಪ ಪಿ ಮಡ್ಡಿ, ದಲಿತ ಮುಖಂಡ ಮೌನೇಶ್ ಗಾಣದಾಳ, ರಮೇಶ್ ಬಾವಿಮನಿ. ಶಬ್ಬೀರ್ ಜಾಲಹಳ್ಳಿ. ಖುರ್ಷಿದ್ ಪಾಟೀಲ್, ಹೈದರ್. ಹನುಮಂತ ಮನ್ನಪೂರಿ, ವೆಂಕಟೇಶ್ ಚಲವಾದಿ, ಮಂಜು, ವೆಂಕನಗೌಡ ವಕೀಲರು ಇದ್ದರು.

## ಪರಿಸರ ಸಂರಕ್ಷಣೆ ಕುರಿತು ಜಾಗೃತಿ ಕಾರ್ಯಕ್ರಮ



**ಯುವ ಮಾರ್ಗ ಸುದ್ದಿ**

**ಮಾನ್ವಿ,ಜೂ.16–** ತಾಲೂಕಿನ ಚೀಕಲಪರ್ವಿ ಗ್ರಾಮದಲ್ಲಿನ ಸರ್ಕಾರಿ ಕಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲೆ ಆವರಣದಲ್ಲಿ ಲೊಯೋಲ ಸಮಾಜ ಸೇವಾ ಕೇಂದ್ರ ಮಾನ್ವಿ ಸಂಯುಕ್ತಾಶ್ರಯದಲ್ಲಿ ನಡೆದ ಪರಿಸರ ಸಂರಕ್ಷಣೆ ಕುರಿತು ಜಾಗೃತಿ ಕಾರ್ಯಕ್ರಮಕ್ಕೆ ಸಸಿ ನೆಡುವ ಮೂಲಕ ಶಾಲೆಯ ಮುಖ್ಯಗುರು ಎಮ್.ಎಸ್. ಸೋಮಶೇಖರ ಚಾಲನೆ ನೀಡಿ ಮಾತನಾಡಿ ಪರಿಸರಕ್ಕೆ ಅತಿ ಹೆಚ್ಚು ಹಾನಿ ಉಂಟುಮಾಡುವ ವಸ್ತುಗಳಲ್ಲಿ ಪ್ಲಾಸ್ಟಿಕ್ ಪ್ರಮುಖವಾಗಿದು ಪ್ರತಿಯೊಬ್ಬರು ಕೂಡ ಪ್ಲಾಸ್ಟಿಕ್ ನಿಂದ ಮಾಡಿದ ಉತ್ಪನ್ನಗಳನ್ನು ಹೆಚ್ಚಿನ ಪ್ರಮಾಣದಲ್ಲಿ ಬಳಸದೆ ಪರಿಸರಕ್ಕೆ ಪೂರಾಕವಾಗಿರುವ ವಸ್ತುಗಳಿಂದ ತಯಾರಿಸಿದ ಉತ್ಪನ್ನಗಳನ್ನು ಬಳಸಿ ಮನೆ ಹಾಗೂ ಶಾಲೆಯ ಆವರಣದಲ್ಲಿ ಪ್ಲಾಸ್ಟಿಕ್ ಮಾಲಿನ್ಯವನ್ನು ತಡೆಗಟ್ಟುವುದಕ್ಕೆ ವಿದ್ಯಾರ್ಥಿಗಳು ಮುಂದಾಗಬೇಕು. ಹಾಗೂ ಶಾಲೆ ಹಾಗೂ ಮನೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಗಿಡ ಮರಗಳನ್ನು ಬೆಳೆಸಿ ಪೋಷಿಸಿ ಎಂದು ತಿಳಿಸಿದರು.

2ನೇ ಪುಟಕ್ಕೆ

## ಮಕ್ಕಳ ಹಕ್ಕುಗಳ ಆಯೋಗದ ಅಧ್ಯಕ್ಷರಿಂದ ಮೂಲಭೂತ ಸೌಲಭ್ಯಗಳ ಪರಿಶೀಲನೆ



**ಯುವ ಮಾರ್ಗ ಸುದ್ದಿ**

**ರಾಯಚೂರು,ಜೂ.16–**ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷರಾದ ಕೆ. ನಾಗಣ್ಣ ಗೌಡ ಅವರು ರಾಯಚೂರು ನಗರದ ವಿವಿಧ ಸರ್ಕಾರಿ ಶಾಲೆ, ಖಾಸಗಿ ಶಾಲೆ, ವಸತಿ ನಿಲಯ ಹಾಗೂ ಆಸ್ಪತ್ರೆಗಳಿಗೆ ಭೇಟಿ ನೀಡಿ ಮಕ್ಕಳ ಸುರಕ್ಷತೆ ಮತ್ತು ಮಕ್ಕಳಿಗೆ ಮೂಲಭೂತ ಸೌಲಭ್ಯಗಳ ಬಗ್ಗೆ ಪರಿಶೀಲಿಸಿದರು.

ಮೊದಲಿಗೆ ನಗರದ ವಿದ್ಯಾಭಾರತಿ ಆಂಗ್ಲ ಮಾಧ್ಯಮ ಸಿಬಿಎಸ್‌ಇ ಪ್ರೌಢಶಾಲೆಗೆ ಭೇಟಿ ನೀಡಿದ ಅವರು, ಮಕ್ಕಳ ಕುಂದುಕೊರತೆಗಳ ಬಗ್ಗೆ, ಶುಲ್ಕದ ವಿವರ ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿ ಅನುಷ್ಠಾನದ ಬಗ್ಗೆ ಪರಿಶೀಲಿಸಿದರು. ಜಿಲ್ಲೆಯ ಎಲ್ಲಾ ಶಾಲಾ-ಕಾಲೇಜು, ವಸತಿ ನಿಲಯ ಹಾಗೂ ಇತರೆ ಸರ್ಕಾರಿ ಕಟ್ಟಡಗಳ 2ನೇ ಪುಟಕ್ಕೆ

## ರಾಜ್ಯದಲ್ಲಿ ಇನ್ನೆರಡು ದಿನ ಮಳೆ

**ಬೆಂಗಳೂರು.ಜೂ.16:** ರಾಜ್ಯದ ಹಲವೆಡೆ ಧಾರಾಕಾರ ಮಳೆ ಮುಂದುವರೆದಿದ್ದು, ಇನ್ನೂ ಎರಡು ದಿನಗಳ ಕಾಲ ಕರಾವಳಿ ಹಾಗೂ ಉತ್ತರ ಒಳನಾಡಿನ ಜಿಲ್ಲೆಗಳಲ್ಲಿ ಅತಿ ಹೆಚ್ಚು ವರ್ಷಧಾರೆ ಸುರಿಯಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ದಕ್ಷಿಣ ಕನ್ನಡ, ಉಡುಪಿ ಜಿಲ್ಲೆಗಳಿಗೆ ರೆಡ್ ಅಲರ್ಟ್ ಘೋಷಿಸಿದ್ದರೆ, ಉತ್ತರ ಕನ್ನಡ, ಬೆಳಗಾವಿ, ಧಾರವಾಡ, ಚಿಕ್ಕಮಗಳೂರು,ಹಾಸನ, ಕೊಡಗು ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ ಹಾಗೂ ಶಿವಮೊಗ್ಗ, ಹಾವೇರಿ, ವಿಜಯನಗರ, ತುಮಕೂರು, ಬಳ್ಳಾರಿ, ಕೊಪ್ಪಳ, ಗದಗ ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ. ಜೂನ್ 18ರಿಂದ ಮಳೆ ಇಳಿಮುಖವಾಗುವ ಸಾಧ್ಯತೆ ಇದೆ ಎಂದು ರಾಜ್ಯ ಹವಾಮಾನ ಇಲಾಖೆ ಮಾಹಿತಿ ನೀಡಿದೆ.

ಮಂಗಳೂರು, ಬೆಳ್ತಂಗಡಿ, ಮೂಡುಬಿದಿರೆ, ಭಾಗಮಂಡಲದಲ್ಲಿ ಅತಿ ಹೆಚ್ಚು ಮಳೆಯಾಗಿದೆ. ಉಪ್ಪಿನಂಗಡಿ, ಮಾಣಿ, ಕ್ಯಾಸಲ್‌ರಾಕ್, ಕದ್ರಾ, ಧರ್ಮಸ್ಥಳ, ಅಂಕೋಲಾ, ಸುಳ್ಯ, ಉಡುಪಿ, ಕಾರ್ಕಳ, ಪುತ್ತೂರು, ಆಗುಂಬೆ, ಗೇರುಸೊಪ್ಪ, ಮುಲ್ಕಿ, ಕುಂದಾಪುರ, ಕೋಟಾ, ಕಾರವಾರ,ಹೊನ್ನಾವರ, 2ನೇ ಪುಟಕ್ಕೆ

## ಮಲದಕಲ್ ಗೆಳೆಯರ ಬಳಗದಿಂದ ಪರಿಸರ ದಿನಾಚರಣೆ



**ಯುವ ಮಾರ್ಗ ಸುದ್ದಿ**

'**ದೇವದುರ್ಗ,ಜೂ.16–**ಮಲದಕಲ್ ಗೆಳೆಯರ ಬಳಗ ಮತ್ತು ಜ್ಞಾನವೃಕ್ಷ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರ ದೇವದುರ್ಗದ ಸಂಯುಕ್ತಾಶ್ರಯದಲ್ಲಿ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಹಸಿರು ದೇವದುರ್ಗ ಪರಿಕಲ್ಪನೆಯ ಅಡಿಯಲ್ಲಿ ತಾಲೂಕಿನಾದ್ಯಂತ ಸಸಿ ನೆಡುವ ಕಾರ್ಯಕ್ರಮಕ್ಕೆ ಇಂದು ಅರಕೇರಾ ತಾಲೂಕಿನ ಚಿಂತಲಕುಂಟಾ ಗ್ರಾಮದಲ್ಲಿ ಸಸಿ ನೆಡುವ ಮೂಲಕ ಚಾಲನೆ ನೀಡಲಾಯಿತು.

ಚಿಂತಲಕುಂಟಾ ಗ್ರಾಮದ ಶ್ರೀ ಆಂಜನೇಯಸ್ವಾಮಿ ದೇವಸ್ಥಾನದ ಆವರಣದಲ್ಲಿ ಸಸಿಗಳನ್ನು ನೆಡುವ ಮೂಲಕ ಗ್ರಾಮದ ಹಿರಿಯರಾದ ಶ್ರೀಗೋಪಾಲಪ್ಪ ಗೌಡ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಸಹಾಯಕ ಪ್ರಾಧ್ಯಾಪಕರಾದ ಡಾ. ಮಾರುತಿ ಕುಮಾರ ಮಲದಕಲ್ , ಗ್ರಾಂ. ಪಂ.ಸದ್ಯಸರಾದ ಶಿವಪ್ಪ ನಾಯಕ, ತಿಮ್ಮಣ್ಣ ಗೌಡ ,ಅಂಬಣ್ಣ ನಾಯಕ , 2ನೇ ಪುಟಕ್ಕೆ

## ಮೊದಲನೇಯ ಪುಟದಿಂದ

# ಜಿಲ್ಲಾ ಮುಖ್ಯ ರಸ್ತೆಗಳ ಅಗಲೀಕರಣಕ್ಕೆ ಅನುದಾನ: ಸತೀಶ್ ಜಾರಕಿಹೊಳಿ

ಅಧಿಕಾರಿಗಳು ಮುನ್ನೆಚ್ಚರಿಕೆ ವಹಿಸಬೇಕು: ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರ ಗ್ರಾಮೀಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಮಾತನಾಡಿ, ಮಳೆ ಆರಂಭವಾಗಿದ್ದರಿಂದ ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳು ಸಾಕಷ್ಟು ಮುನ್ನೆಚ್ಚರಿಕೆ ವಹಿಸಬೇಕು. ಮಳೆ ನೀರು ಗಟಾರಿನಲ್ಲಿ ಸರಿಯಾಗಿ ಹರಿದು ಹೋಗುವ ವ್ಯವಸ್ಥೆ ಮಾಡಬೇಕು. ಚರಂಡಿಯನ್ನು ಶುಚಿಗೊಳಿಸಬೇಕು. ನೀರು ರಸ್ತೆಯಲ್ಲಿ ನಿಲ್ಲದಂತೆ ನೋಡಿಕೊಳ್ಳಬೇಕು ಎಂದು ಲೋಕೊಪಯೋಗಿ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಶಿರಗುಪ್ಪ–ಬಳ್ಳಾರಿ ರಸ್ತೆ ಸರಿಪಡಿಸಿ: ಶಿರಗುಪ್ಪದಿಂದ ಬಳ್ಳಾರಿಗೆ ಹೊರಡುವ ರಸ್ತೆಯು ರಾಯಚೂರ ಜಿಲ್ಲಾ ವ್ಯಾಪ್ತಿಯ ದಡೇಸಗೂರು ಬಳಿಯಲ್ಲಿ ತುಂಬಾ ಹದಗೆಟ್ಟಿದೆ. ಬೀದರ, ಕಲಬುರಗಿ, ಯಾದಗಿರಿ, ಸುರಪುರ, ಶಹಾಪುರ, ಜೇವರಗಿ, ಲಿಂಗಸೂರ, ಮಸ್ಕಿಯಿಂದ ಬೆಂಗಳೂರಿಗೆ ಹೊರಡುವ ಎಲ್ಲ ಬಸ್ಸಗಳು ಇದೆ ಮಾರ್ಗವಾಗಿ ಸಂಚರಿಸುತ್ತವೆ. ಕಲ್ಯಾಣ ಕರ್ನಾಟಕ ಭಾಗದ ಅನೇಕ ಜನರು ಬೆಂಗಳೂರಿಗೆ ಸಂಚರಿಸಲು ಈ ರಸ್ತೆ ಅತ್ಯಂತ ಪ್ರಮುಖವಾಗಿದೆ. ಆದ್ದರಿಂದ ಕೂಡಲೇ ಈ ರಸ್ತೆಯ ದುರಸ್ತಿಯನ್ನು ಬೇಗನೆ ಪೂರ್ಣಗೊಳಿಸಬೇಕು ಎಂದು ಸಿಂಧನೂರ ವಿಧಾನಸಭಾ ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ ಹಾಗೂ ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿಯ ಅಧ್ಯಕ್ಷರು ಆಗಿರುವ ಮಸ್ಕಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಆರ್ ಬಸನಗೌಡ ತುರವಿಹಾಳ ಅವರು ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಗುಣಮಟ್ಟ ಕಾಯ್ದುಕೊಳ್ಳಿ: ಮಳೆಗಾಲದ ಈ ವೇಳೆಯಲ್ಲೂ ಅಲ್ಲಲ್ಲಿ ರಸ್ತೆಗಳ ನಿರ್ಮಾಣ ಕಾರ್ಯ ನಡೆದಿದೆ. ಸುಗಮ ಸಂಚಾರಕ್ಕೆ ರಸ್ತೆ ನಿರ್ಮಾಣ ಕಾರ್ಯ ಸದ್ಯ ಅನಿವಾರ್ಯವಾದರು ಸಹ ಮಳೆ ನೀರಿನ ಕಾರಣಕ್ಕೆ ಕಾಮಗಾರಿ ಕಳಪೆಯಾಗುವ ಸಾಧ್ಯತೆ ಇದೆ. ಈ ಬಗ್ಗೆ ಪರಿಶೀಲಿಸಬೇಕು. ಮತ್ತೆ ಮತ್ತೆ ದುರಸ್ತಿಗೆ ಬಾರದಂತೆ ರಸ್ತೆಗಳು ಶಾಶ್ವತವಾಗಿ ಸುಸ್ಥಿತಿಯಿಂದಿರುವ ಹಾಗೆ ಕಾಮಗಾರಿಯ ಗುಣಮಟ್ಟದ ಕಾಮಗಾರಿಗೆ ಒತ್ತು ನೀಡಬೇಕು ಎಂದು ರಾಯಚೂರ ನಗರ ಕ್ಷೇತ್ರದ ಶಾಸಕರಾದ ಶಿವರಾಜ ಪಾಟೀಲ ಅವರು ತಿಳಿಸಿದರು.

ದೇವದುರ್ಗದಲ್ಲಿ ಟೋಲ್ ಸ್ಥಗಿತಗೊಳಿಸಿ: ದೇವದುರ್ಗ ವಿಧಾನಸಭಾ ಕ್ಷೇತ್ರದಲ್ಲಿ ಎರಡು ಕಡೆಗಳಲ್ಲಿ ಟೋಲ್ ಇರುವುದರಿಂದ ಜನಸಾಮಾನ್ಯರಿಗೆ ಟೋಲ್ ಪಾವತಿಸಿ ಸಂಚರಿಸಲು ಅನಾನುಕೂಲವಾಗುತ್ತಿದೆ. ಆದ್ದರಿಂದ ಈ ಟೋಲಗಳನ್ನು ಸ್ಥಗಿತಗೊಳಿಸಿ ಜನರಿಗೆ ಸುಗಮ ಸಂಚಾರಕ್ಕೆ ಅವಕಾಶ ಕಲ್ಪಿಸಬೇಕು ಎಂದು ಇದೆ ವೇಳೆ ದೇವದುರ್ಗ ವಿಧಾನಸಭಾ ಕ್ಷೇತ್ರದ ಶಾಸಕರಾದ ಕರೆಮ್ಮ ನಾಯಕ ಅವರು ಸಚಿವರಲ್ಲಿ ಮನವಿ ಮಾಡಿದರು.

ಅಪಘಾತ ತಪ್ಪಿಸಿ: ಕುರ್ಡಿಯಿಂದ ಕಪಗಲ್ ಮಧ್ಯೆದ ರಸ್ತೆಯು ತಿರುವು ಮುರುವು ಇದ್ದುದರಿಂದಾಗಿ ಅಲ್ಲಿ ಇತ್ತೀಚೆಗೆ ಅಪಘಾತ ಪ್ರಕರಣಗಳು ಹೆಚ್ಚುತ್ತಿವೆ. ಇದು ತಪ್ಪಬೇಕು. ತಿರುವು ಮುರುವು ತಪ್ಪಿಸಿ ರಸ್ತೆಯು ನೇರವಾಗಿ ನಿರ್ಮಾಣವಾಗುವಂತೆ ಕ್ರಮ ವಹಿಸಬೇಕು ಎಂದು ವಿಧಾನ ಪರಿಷತ್ ಶಾಸಕರಾದ ಎ ವಸಂತಕುಮಾರ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಸಂಸದರಾದ ಜಿ ಕುಮಾರನಾಯಕ, ಮಾನವಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಹಂಪಯ್ಯ ನಾಯಕ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ, ಲೋಕೋಪಯೋಗಿ ಇಲಾಖೆಯ ಅಭಿಯಂತರರಾದ ವೆಂಕಟೇಶ ಗಳಗ, ರಾಘವೇಂದ್ರ ಕುಲಕರ್ಣಿ, ಅಸ್ಲಾಂ, ಪ್ರಕಾಶ, ಹೊನ್ನೇಶ, ಶಿವಾಜಿ ಸೇರಿದಂತೆ ಇತರರು ಇದ್ದರು.

# ಪರಿಸರ ಸಂರಕ್ಷಣೆ ಕುರಿತು ಜಾಗೃತಿ ಕಾರ್ಯಕ್ರಮ

ಅಯುಷ್ ವೈದ್ಯಾಧಿಕಾರಿ ಡಾ.ರಾಜೇಂದ್ರ ಮಾತನಾಡಿ ಮರಗಳು ಮಾನವರಿಗೆ ಅಗತ್ಯವಿರುವ ಶುದ್ದವಾದ ಅಮ್ಲಜನಕವನ್ನು ನೀಡುತ್ತವೆ ಅದ್ದರಿಂದ ನಾವು ಮರಗಿಡಗಳನ್ನು ಮಕ್ಕಳಂತೆ ಅರೈಕೆ ಮಾಡಬೇಕು ಎಂದು ತಿಳಿಸಿದರು.

ಲೋಯಾಲ ಸಂಸ್ಥೆಯ ನಿರ್ದೇಶಕರಾದ ಫಾ.ಸಿಪ್ರಿಯನ್ ಟೆಲ್ಲಿಸ್ . ಆರೋಗ್ಯ ಇಲಾಖೆಯ ಮಂಜುಳಾ, ಪಾಂಡು , ಜನಶಕ್ತಿ ಟ್ರಸ್ಟ್ ಸದಸ್ಯರಾದ ಈರಮ್ಮ , ಫಾ.ಜಾರ್ಜ ,ಅನ್ನಮ್ಮ ,ಪ್ರಕಾಶ , ಕರಿಯಮ್ಮ ಸೇರಿದಂತೆ ಶಾಲೆಯ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಇದ್ದರು.

# ಗೆಳೆಯರ ಬಳಗದಿಂದ ಪರಿಸರ ದಿನಾಚರಣೆ

ರವಿಚಂದ್ರ ನಾಯಕ್ , ವೆಂಕಟೇಶ ದೊರೆ , ಸಾಬಯ್ಯ ದೊರೆ, ಉಪನ್ಯಾಸಕರಾದ ವಿನೋದ್ ಕುಮಾರ್ ನಾಯಕ ಹಿರೇಬೂದೂರು, ಯುವ ಮುಖಂಡರಾದ ವಿಜಯಕುಮಾರ್ ಪಾಟೀಲ್,ವಿನೋದ್ ಕುಮಾರ್,ಗಂಗಣ್ಣ,ಬಸನಗೌಡ ಕರೇಣ್ಣ,ಮಂಜುನಾಥ,ಮಹೇಶ ನಾಯಕ,

ಸೇರಿದಂತೆ ಚಿಂತಲಕುಂಟಾ ಗ್ರಾಮದ ಯುವಕರು ಮತ್ತು ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಚಿಂತಲಕುಂಟಾ ಗ್ರಾಮದ ದೇವಸ್ಥಾನ, ಶಾಲೆಯ ಆವರಣ ಸೇರಿದಂತೆ ಸಾರ್ವಜನಿಕ ಸ್ಥಳಗಳಲ್ಲಿ 400 ಕ್ಕೂ ಸಸಿಗಳನ್ನು ನೆಡಲಾಯಿತು.

ಸಹಾಯಕ ಪ್ರಾಧ್ಯಾಪಕರಾದ ಡಾ. ಮಾರುತಿ ಕುಮಾರ ಮಲದಕಲ್ ರವರ ನಾಯಕತ್ವದಲ್ಲಿ ದೇವದುರ್ಗ ತಾಲ್ಲೂಕಿನಾದ್ಯಂತ ಪ್ರತಿವರ್ಷ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಹಸಿರು ದೇವದುರ್ಗ ಪರಿಕಲ್ಪನೆಯ ಅಡಿಯಲ್ಲಿ ಕಳೆದ ಮೂರು ವರ್ಷಗಳಿಂದ ಪ್ರತಿ ವರ್ಷ 5 ಸಾವಿರ ಸಸಿಗಳನ್ನು ನೆಡಲಾಗುತ್ತದೆ

## ಮಕ್ಕಳ ಹಕ್ಕುಗಳ ಆಯೋಗದ ಅಧ್ಯಕ್ಷರಿಂದ ಸೌಲಭ್ಯಗಳ ಪರಿಶೀಲನೆ

ಭಾಗದಲ್ಲಿ ಮಕ್ಕಳ ಸಹಾಯವಾಣಿ 1098 ಮತ್ತು ಪೊಲೀಸ್ ಸಹಾಯವಾಣಿ –112 ಕಡ್ಡಾಯವಾಗಿ ಬರೆಯಿಸಬೇಕು, ಮಕ್ಕಳ ಹಕ್ಕುಗಳ, ಪೋಕ್ಸೋ ಕಾಯ್ದೆ, ಬಾಲ್ಯ ವಿವಾಹ ನಿಷೇಧ ಕಾಯ್ದೆಗಳ ಬಗ್ಗೆ ಜಾಗೃತಿ ಮೂಡಿಸಬೇಕು ಎಂದು ತಿಳಿಸಿದರು.

ನಂತರ ಬೋಳಮಾನ ದೊಡ್ಡಿ ಅಲ್ಪಸಂಖ್ಯಾತ ವಸತಿ ನಿಲಯ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಸತಿ ನಿಲಯಗಳಿಗೆ ಭೇಟಿ ನೀಡಿ ಮಕ್ಕಳಿಗೆ ನೀಡುತ್ತಿರುವ ಆಹಾರ ಸಾಮಗ್ರಿಗಳ ಗುಣಮಟ್ಟ, ಸ್ವಚ್ಛತೆ, ಕುಡಿಯುವ ನೀರಿನ ಸೌಲಭ್ಯಗಳ ಕುರಿತು ಪರಿಶೀಲಿಸಿದರು. ಮಕ್ಕಳಿಗೆ ಸರ್ಕಾರದಿಂದ ನೀಡಲಾಗುತ್ತಿರುವ ಸೌಲತ್ತುಗಳನ್ನು ಸರಿಯಾಗಿ ತಲುಪಿಸಬೇಕು ಮಕ್ಕಳ ಸುರಕ್ಷತೆ ವಿಷಯದಲ್ಲಿ ಯಾವುದೇ ಲೋಪ ದೋಷಗಳು ಕಂಡು ಬಂದಲ್ಲಿ ಆಯೋಗವು ಗಂಭೀರವಾಗಿ ಪರಿಗಣಿಸಿ ಸಂಬಂಧಪಟ್ಟವರ ಮೇಲೆ ಕ್ರಮ ಕೈಗೊಳ್ಳಲಾಗುವುದು ಎಂದು ಸೂಚನೆ ನೀಡಿದರು.

ನಂತರ ಮುನ್ನೂರುವಾಡಿ ಕರ್ನಾಟಕ ಪಬ್ಲಿಕ್ ಶಾಲೆಗೆ ಭೇಟಿ ನೀಡಿ ಮಕ್ಕಳಿಗೆ ಬಿಸಿ ಊಟ ವಿತರಣೆ, ಮೊಟ್ಟೆ ವಿತರಣೆಯನ್ನು ಪರಿಶೀಲಿಸಿದರು. ಶಾಲೆಗಳಿಗೆ ಬಿಸಿ ಊಟಕ್ಕಾಗಿ ಪೂರೈಕೆ ಆಗಿರುವ ಆಹಾರ ಸಾಮಗ್ರಿಗಳ ಗುಣಮಟ್ಟ ಪರಿಶೀಲಿಸಿ ಗುಣಮಟ್ಟದ ಆಹಾರ ಸಾಮಗ್ರಿಗಳನ್ನು ಪಡೆದು ಮಕ್ಕಳಿಗೆ ವಿತರಿಸಲು ಸೂಚಿಸಿದರು. ಶಾಲೆಯ ಆವರಣದಲ್ಲಿ ನೀರು ನಿಂತಿದ್ದು ಮಕ್ಕಳಿಗೆ ಆಟವಾಡಲು ಸಮಸ್ಯೆ ಆಗುತ್ತದೆ. ಕೂಡಲೇ ಮೈದಾನವನ್ನು ಸಮತಟ್ಟುಗೊಳಿಸಿ ಶಾಲೆಯ ನಿರ್ವಹಣೆಗೆ ಬಿಡುಗಡೆ ಆದ ಅನುದಾನವನ್ನು ಬಳಕೆ ಮಾಡಿಕೊಂಡು ಶಾಲೆಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಿ ಮಕ್ಕಳ ಸ್ನೇಹಿ ವಾತಾವರಣ ನಿರ್ಮಿಸಲು ಕ್ಷೇತ್ರ ಶಿಕ್ಷಣ ಅಧಿಕಾರಿ ಈರಣ್ಣ ಕೋಸಗಿ ಇವರಿಗೆ ಸೂಚಿಸಿದರು. ನಂತರ ರಿಮ್ಸ್ ಆಸ್ಪತ್ರೆಗೆ ಭೇಟಿ ನೀಡಿ ಅಲ್ಲಿನ ಎನ್‌ಆರ್‌ಸಿ ಘಟಕಕ್ಕೆ ಬೇಟಿ ನೀಡಿ ಪರಿಶೀಲಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಅಮರೇಶ್ ಹಾವಿನ್, ಕ್ಷೇತ್ರ ಶಿಕ್ಷಣ ಅಧಿಕಾರಿ ಈರಣ್ಣ ಕೊಸಗಿ, ರಕ್ಷಣಾಧಿಕಾರಿ ಹನುಮೇಶ ಇತರ ಇಲಾಖೆಗಳ ಅಧಿಕಾರಿಗಳು ಹಾಜರಿದ್ದರು.

# ರಾಜ್ಯದಲ್ಲಿ ಇನ್ನೆರಡು ದಿನ ಮಳೆ

ಶೃಂಗೇರಿ, ಕಳಸ, ಕೊಪ್ಪ, ನಾಪೋಕ್ಲು, ಸೋಮವಾರಪೇಟೆ, ಕುಮಟಾ, ಬೆಳಗಾವಿ, ಖಾನಾಪುರ, ಕಿತ್ತೂರು, ಹಾರಂಗಿ, ಸಂಕೇಶ್ವರ, ಹುಕ್ಕೇರಿ, ವಿಜಯಪುರದಲ್ಲಿಯೂ ಭಾರಿ ಮಳೆ ದಾಖಲಾಗಿದೆ.

ರಾಜಧಾನಿಯಲ್ಲಿ ಮೋಡ ಕವಿದ ವಾತಾವರಣ: ಬೆಂಗಳೂರಿನಲ್ಲಿ ಮೋಡ ಕವಿದ ವಾತಾವರಣವಿದ್ದು, ಮಳೆಗಿಂತ ವೇಗವಾಗಿ ಗಾಳಿ ಬೀಸುತ್ತಿದೆ. ಇದರಿಂದ ಜನರಿಗೆ ಶೀತದ ವಾತಾವರಣದ ಅನುಭವವಾಗುತ್ತಿದೆ. ಮುಂದಿನ ಎರಡು ದಿನಗಳವರೆಗೆ ವಾತಾವರಣ ಹೀಗೆಯೇ ಇರಲಿದೆ.ಮೂರು ದಿನಗಳಿಂದ ನಗರದಲ್ಲಿ ಜಿಟಿಜಿಟಿ ಮಳೆಯಾಗುತ್ತಿದೆ. ಪ್ರತಿ ಗಂಟೆಗೆ 40–50 ಕಿ.ಮೀ. ವೇಗದಲ್ಲಿ ಗಾಳಿ ಬೀಸಲಿದೆ. ಈ ಅವಧಿಯಲ್ಲಿ ಹಗುರದಿಂದ ಮಳೆಯಾಗಬಹುದು. ಈ ಹಿನ್ನೆಲೆಯಲ್ಲಿ ಉಷ್ಣಾಂಶ ಕುಸಿತವಾಗಿದೆ. ವಾಡಿಕೆಯಂತೆ 28.7 ಡಿಗ್ರಿ ಸೆಲ್ಸಿಯಸ್ ದಾಖಲಾಗಬೇಕಿತ್ತು. ಆದರೆ 26.7 ಡಿಗ್ರಿ ಸೆಲ್ಸಿಯಸ್ ವರದಿಯಾಗಿದೆ.

ಬೆಂಗಳೂರು ನಗರದಲ್ಲಿ 26.7 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಹಾಗೂ 19.9 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಹೆಚ್‌ಎಎಲ್‌ನಲ್ಲಿ 29.0 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಮತ್ತು 19.9 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ 28.3 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಹಾಗೂ 20.2 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ ದಾಖಲಾಗಿದೆ.

# ನಮ್ಮ ಸ್ಥಾನ ಉಳಿಸಿಕೊಂಡರೆ ಸಾಕಾಗಿದೆ ಅಧಿಕಾರ ಶಾಶ್ವತ ಅಲ್ಲ : ಸಚಿವ ಸತೀಶ್ ಜಾರಕಿಹೊಳಿ

**ರಾಯಚೂರು,ಜೂ.16–** ರಾಜಕೀಯ ನಿಂತ ನೀರಲ್ಲ. ಸಚಿವ ಸಂಪುಟ ಪುನರ್ ರಚನೆಯಲ್ಲಿ ನಾವು ನಮ್ಮ ಸ್ಥಾನವನ್ನು ಉಳಿಸಿಕೊಂಡರೆ ಸಾಕಾಗಿದೆ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಹೇಳಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಮ್ಮ ಪಕ್ಷದ ನಾಯಕರು ಇತ್ತಿಚೆಗೆ ಹೈಕಮಾಂಡ್ ನಾಯಕರನ್ನು ಭೇಟಿ ಮಾಡಿದ್ದರು. ಅಲ್ಲಿ ಯಾವ ಚರ್ಚೆಯಾಗಿದೆಯೋ ಗೊತ್ತಿಲ್ಲ. ಸಂಪುಟ ಪುನರ್‌ರಚನೆ ಅಥವಾ ವಿಸ್ತರಣೆ ಮಾಡುವುದು ವರಿಷ್ಠರ ನಿರ್ಧಾರ. ನಾವು ಸಂಪುಟದ ಭಾಗವಷ್ಟೆ. ಬೇರೆಯವರನ್ನು ಸೇರಿಸಿಕೊಳ್ಳುವುದು, ಬಿಡುವುದು ನಮ್ಮ ಕೈಲಿಲ್ಲ. ನಮ್ಮ ಸ್ಥಾನಗಳನ್ನು ಉಳಿಸಿಕೊಂಡರೆ ಸಾಕಾಗಿದೆ ಎಂದರು.ರಾಜಕೀಯ ನಿಂತ ನೀರಲ್ಲ. ನದಿ ಹರಿದು ವಿಜಯವಾಡದ ಬಳಿ ಸಮುದ್ರ ಸೇರಬಹುದು ಎಂದು ಮಾರ್ಮಿಕವಾಗಿ ಹೇಳಿದರು. ಸರ್ಕಾರದಲ್ಲಿ ಏರಿಳಿತಗಳು ಸಾಮಾನ್ಯ. ಹಿಂದೆ ಬಿಜೆಪಿಯಲ್ಲಿ ಮೂರು ಜನ ಮುಖ್ಯಮಂತ್ರಿಗಳಾಗಿದ್ದರು. ನಮಲ್ಲಿ ಅಂತಹ ಪರಿಸ್ಥಿತಿ ಇಲ್ಲ. ಮುಖ್ಯಮಂತ್ರಿ ಸ್ಥಾನ ಗಟ್ಟಿಯಾಗಿದೆ. ಅಧಿಕಾರ ಯಾರಿಗೂ ಶಾಶ್ವತ ಅಲ್ಲ. ಸಚಿವರ ಸ್ಥಾನಗಳಲ್ಲಿ ಬದಲಾವಣೆಯಾಗಬಹುದು ಎಂದರು. ಬಹ ಳಷ್ಟು ಮಂದಿ ಹಿರಿಯರು ನಮಗೂ ಅವಕಾಶ ಕೊಡಿ ಎಂದು ಮನವಿ ಮಾಡುತ್ತಿದ್ದಾರೆ. ಹೊಸ ನಾಯಕತ್ವ ಬಳಸಲು ಬಿಜೆಪಿಯಲ್ಲಿ ಮೊದಲ ಬಾರಿ ಗೆದ್ದವರನ್ನೆ ಮುಖ್ಯಮಂತ್ರಿ ಮಾಡಿದ್ದಾರೆ. ವಿಧಾನಪರಿಷತ್‌ನ ಆಯ್ಕೆಯ ಲ್ಲೂ ಕಾರ್ಯಕರ್ತರಿಗೆ ಅವಕಾಶ ಕೊಟ್ಟಿ ದ್ದಾರೆ. ಆ ಮಾದರಿ ನಮಲ್ಲೂ ಅನುಷ್ಠಾನಕ್ಕೆ ಬರಬೇಕು ಎಂದು ಹೇಳಿದರು.

ವಿಧಾನಪರಿಷತ್ ಸದಸ್ಯರನ್ನು ಸಚಿವರ ಸ್ಥಾನಕ್ಕೆ ಸೇರಿಸಿಕೊಳ್ಳುವುದು ಅಥವಾ ಬಿಡುವುದು ವರಿಷ್ಠರ ಹಂತದಲ್ಲಿರುವ ಚರ್ಚೆ. ನಾನು ಅದಕ್ಕೆ ಪ್ರತಿಕ್ರಿಯಿಸುವುದಿಲ್ಲ. ಸದ್ಯಕ್ಕೆ ನಮಗೆ ವಹಿಸಿರುವ ಜವಾಬ್ದಾರಿಯತ್ತ ಗಮನ ಹರಿಸುತ್ತೇನೆ. ಮುಖ್ಯಮಂತ್ರಿ ಬದಲಾವಣೆಯಂತೂ ಸದ್ಯಕ್ಕಿಲ್ಲ ಎಂದು ಪುನರುಚ್ಚರಿಸಿದರು. ಜಾತಿಗಣತಿಗೆ ನೂರಾರು ಕೋಟಿ ರೂ. ವ್ಯಯವಾಗುತ್ತದೆ ಎಂದು ಟೀಕೆ ಮಾಡುವುದು ಸರಿಯಲ್ಲ. ಕೋವಿಡ್ ಸಂದರ್ಭದಲ್ಲಿ ಎರಡೂವರೆಯಿಂದ ಮೂರು ಸಾವಿರ ಕೋಟಿ ರೂ.ಗಳಷ್ಟು ನಷ್ಟವಾಯಿತು. ಅದರ ಬಗ್ಗೆ ಯಾರೂ ಚರ್ಚೆ ಮಾಡುವುದಿಲ್ಲ ಎಂದು ಆರೋಪಿಸಿದರು.

ಇಲ್ಲಿ ದುಡ್ಡಿನ ಪ್ರಶ್ನೆ ಉದ್ಭವಿಸುವುದಿಲ್ಲ. ಜನರನ್ನು ಅಸಮಾಧಾನದಲ್ಲಿಟ್ಟು ವರದಿ ಜಾರಿ ಮಾಡಿದರೆ ಪ್ರಯೋಜನವಾಗುವುದಿಲ್ಲ. ಎಲ್ಲರನ್ನೂ ಸಮಾಧಾನಪಡಿಸಲು ಮತ್ತೆ 300 ಕೋಟಿ ರೂ. ವ್ಯರ್ಥವಾದರೂ ಚಿಂತೆಯಿಲ್ಲ ಎಂದರು. ಹೈಕಮಾಂಡ್ ಸೂಚನೆ ನೀಡಿರುವುದರಲ್ಲಿ ತಪ್ಪಿಲ್ಲ. ಜನರ ಭಾವನೆಗಳಿಗೆ ಬೆಲೆ ಕೊಡುವುದು ಸರ್ಕಾರ ಮತ್ತು ಪಕ್ಷದ ಜವಾಬ್ದಾರಿ. ವಿರೋಧ ಮಾಡುವವರು ದೆಹಲಿಗೆ ಹೋಗಿ ದೂರು ನೀಡಿದರು. ಮತ್ತೊಮೆ ಸಮೀಕ್ಷೆ ಮಾಡಿ ದಾಗ ಯಾರ ಆಕ್ಷೆಪವೂ ಇರುವುದಿಲ್ಲ ಎಂ ದು ಹೈಕಮಾಂಡ್ ಸಲಹೆ ನೀಡಿದೆ ಎಂದರು.



ವಿರೋಧ ಮಾಡಿರುವವರಲ್ಲಿ ನಮ ಪಕ್ಷದ ಶಾಸಕರು, ಸಚಿವರೂ ಇದ್ದಾರೆ. ಬಿಜೆಪಿ, ಜೆಡಿಎಸ್‌ನಿಂದಲೂ ವಿರೋದಗಳು ವ್ಯಕ್ತವಾಗಿದ್ದವು ಎಂದರು. ರಾಜ್ಯ ಸರ್ಕಾರದಿಂದ ಅಭಿವೃದ್ಧಿ ಕುಂಠಿತವಾಗಿದೆ ಎಂದು ಆರೋಪಿಸುವುದು ರಾಜಕೀಯ ಪ್ರೆರಿತ.

ಬಿಜೆಪಿಯವರು ಮುಂದಿನ ಮೂರು ವರ್ಷಗಳ ಕಾಲವೂ ಈ ರೀತಿಯ ಮಾತುಗಳನ್ನು ಹೇಳಿಕೊ ಳ್ಳುತ್ತಲೇ ಕಾಲ ಕಳೆಯುತ್ತಾರೆ. ಅವರಿಗೆ ಬೇರೆ ವಿಚಾರಗಳಿಲ್ಲ. ಆದರೆ ನಮಲ್ಲಿ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡುತ್ತಿದ್ದೇವೆ ಎಂದು ತಿಳಿಸಿದರು. ಲೋಕೋಪಯೋ ಗಿ ಇಲಾಖೆಯಿಂದ ಗುತ್ತಿಗೆ ನೀಡುವಲ್ಲಿ ಯಾಂತ್ರಿಕೃತ ವ್ಯವಸ್ಥೆ ಇದೆ. ಕಡಿಮೆ ದರಕ್ಕೆ ಯಾರು ಟೆಂಡರ್ ಹಾಕುತ್ತಾರೋ ಅವರಿಗೆ ಅವಕಾಶ ಸಿಗುತ್ತದೆ. ಇದರಲ್ಲಿ ನಾವು ಹಸ್ತಕ್ಷೆಪ ಮಾಡುವುದಿಲ್ಲ ಎಂದರು.

# 371ಜೆ ಸಮರ್ಪಕ ಜಾರಿ ಕುರಿತು ಚರ್ಚೆ: ಮಾನೂರೆ

**ಬೀದರ್: ಜೂ.16–** ಕಲ್ಯಾಣ ಕರ್ನಾಟಕ 371 ಜೆ ಹೋರಾಟ ಸಮಿತಿ ವತಿಯಿಂದ ತೆಲಂಗಾಣ ನಿ. ನ್ಯಾಯಮೂರ್ತಿ ಹಾಗೂ ಉಪಲೋಕಾಯುಕ್ತರಾದ ಶಿವರತ್ನಂ ಅವರಿಗೆ ಭೇಟಿ ನೀಡಿ ತೆಲಂಗಾಣದ 371 ಡಿ ಯಾವ ರೀತಿ ಸಮರ್ಪಕವಾಗಿ ಅನುಷ್ಠಾನಗೊಳಿಸಲಾಗಿದೆ ರಾಜ್ಕಯದ ಲ್ಯಾಣ ಕರ್ನಾಟಕದಲ್ಲಿ ಅದೇ ಮಾದರಿಯಲ್ಲಿ ಉದ್ಯೋಗ ಹಾಗೂ ಶಿಕ್ಷಣ ಸೌಲಭ್ಯದ ವಿಷಯದಲ್ಲಿ ಹೇಗೆ ಅನುಷ್ಠಾನಗೊಳಿಸಬೇಕು? ಎಂಬ ಇತ್ಯಾದಿ ವಿಷಯಗಳ ಕುರಿತು ಸುದೀರ್ಘವಾಗಿ ಚರ್ಚಿಸಲಾಗಿದೆ ಎಂದು ಸಮಿತಿ ಅಧ್ಯಕ್ಷ ಅಶೋಕಕುಮಾರ ಮಾನೂರೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ಹಿಂದೆ ಬೀದರನಲ್ಲಿ ಸುದ್ದಿಗೋಷ್ಠಿ ಕರೆದು ತೆಲಂಗಾಣ ಮತ್ತು ಮರಾಠವಾಡಾಗೆ ನಿಯೋಗ ಕೊಂಡೊಯ್ಯುವ ಕುರಿತು ತಿಳಿಸಲಾಗಿತ್ತು. ಅದರ ಮೊದಲನೇ ಭಾಗವಾಗಿ ಹೈದರಾಬಾದನ ಕ್ರಾಂತಿನಗರದಲ್ಲಿರುವ ನ್ಯಾ. ಶಿವರತ್ನಂ ಅವರ ಕಾನೂನು ಕಚೇರಿಯಲ್ಲಿ ಭೇಟಿ ಮಾಡಿ ಈ ಕುರಿತು ಸುಮಾರು ಒಂದು ಗಂಟೆಗಳ ಕಾಲ ಚರ್ಚಿಸಲಾಯಿತು ಎಂದು ತಿಳಿಸಿದ್ದಾರೆ.

ಸಮಿತಿಯ ಗೌರವಾಧ್ಯಕ್ಷರಾದ ಪೂಜ್ಯ ಶ್ರೀ ಜಗದ್ಗುರು ಡಾ. ಚನ್ನಬಸವಾನಂದ ಸ್ವಾಮೀಜಿ ಮಾತನಾಡಿ 371 ಡಿ



ತೆಲಂಗಾಣದಲ್ಲಿ ಸಮರ್ಪಕವಾಗಿ ಜಾರಿ ಮಾಡಿದ ಅಧಿಕೃತ ದಾಖಲೆಗಳು ತಮಗೆ ನೀಡುವುದಾಗಿ ಭರವಸೆ ನೀಡಿದ್ದಾರೆ. ಜೊತೆಗೆ ತಮ್ಮ ಹೋರಾಟ ಸಮಿತಿಗೆ ಬೇಕಾಗುವ ಎಲ್ಲಾ ಸಹಕಾರ ನೀಡುವುದಾಗಿ ಭರವಸೆ ನೀಡಿದ್ದಾರೆ ಎಂದು ತಿಳಿಸಿದರು. ತೆಲಂಗಾಣ ನಂತರ ಮುಂದಿನ 15 ದಿವಸಗಳ ಒಳಗಾಗಿ ಮರಾಠವಾಡಾದ ಕಾನೂನು ತಜ್ಞರೊಂದಿಗೆ ಚರ್ಚಿಸಲು ಎರಡನೇ ನಿಯೋಗ ನಮ್ಮ ಸಮಿತಿ ವತಿಯಿಂದ ಕೊಂಡೊಯ್ಯಲಾಗುವುದು ಎಂದು ಪೂಜ್ಯ ಸ್ವಾಮೀಜಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಿಯೋಗದಲ್ಲಿ ವಕೀಲರಾದ ಸಮಿತಿಯ ಜಂಟಿ ಕಾರ್ಯದರ್ಶಿ ಶಿವರಾಜ ಜೊಕಾಲೆ ಹಾಗೂ ರಮೇಶ ನೇಳ್ಗೆ ಉಪಸ್ಥಿತರಿದ್ದರು.

# ಹಿಂದೂ ಧರ್ಮಸಭೆ 18ರಂದು

**ಜೇವರ್ಗಿ: ಜೂ.16–**ಪಟ್ಟಣದ ಸಜ್ಜನ ಕಲ್ಯಾಣ ಮಂಟಪದಲ್ಲಿ ಜೂನ್ 18ರಂದು ಮಧ್ಯಾಹ್ನ 3 ಗಂಟೆಗೆ ಅಂತರರಾಷ್ಟ್ರೀಯ ಹಿಂದೂ ಪರಿಷದ್ ಹಾಗೂ ರಾಷ್ಟ್ರೀಯ ಬಜರಂಗದಳ ತಾಲ್ಲೂಕು ಘಟಕದ ವತಿಯಿಂದ ಹಿಂದೂ ಧರ್ಮ ಸಭೆ ಆಯೋಜಿಸಲಾಗಿದೆ ಎಂದು ಸಂಘಟನೆಯ ಉತ್ತರ ಕರ್ನಾಟಕ ಸಂಘಟನಾ ಕಾರ್ಯದರ್ಶಿ ಮಲ್ಲಿಕಾರ್ಜುನ ಆದ್ವಾನಿ ಹೇಳಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಶನಿವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ‘ಇಡೀ ವಿಶ್ವದಲ್ಲಿ – ಹಿಂದೂಗಳ ಮೇಲೆ ಆಗುತ್ತಿರುವ ದರ್ಪ, ದೌರ್ಜನ್ಯಗಳನ್ನು ವಿರೋಧಿಸುವತ್ತನಾವು ಒಂದಾಗಬೇಕಿದೆ.

ಮಾನವೀಯ ಹಾಗೂ ನೈತಿಕ ಮೌಲ್ಯಗಳಿಗೆ ಧಕ್ಕೆಯಂಟಾದಾಗ –ಎಲ್ಲ ಹಿಂದೂಗಳು ಒಂದಾಗಬೇಕು. ಹಿಂದೂ ಸಮಾಜ ಸಂಘಟಿತರಾಗಬೇಕು. ಜಾಗೃತರಾಗಿ ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ನಮಗೆಲ್ಲ ಬಹಳ ಕಷ್ಟದ ದಿನಗಳು ಎದುರಾಗಲಿವೆ’ ಎಂದು ಹೇಳಿದರು.

‘ಬೆಂಗಳೂರಿನಲ್ಲಿ ಅಕ್ರಮ ಬಾಂಗ್ಲಾ ವಲಸಿಗರಿದ್ದಾರೆ. ಅವರನ್ನು ಪತ್ತೆ ಹಚ್ಚಿ, ಹೊರಗಟ್ಟುವ ಕೆಲಸವಾಗಬೇಕು. ಇಲ್ಲವಾದಲ್ಲಿ ಬಾಂಗ್ಲಾದ ಪರಿಸ್ಥಿತಿ ಜ್ಯ ದಲ್ಲಿ ನಿರ್ಮಾಣವಾಗಲಿದೆ. ಬಾಂಗ್ಲಾದಲ್ಲಿ 1,400 ಹಿಂದೂ ಶಿಲ್ಪಗಳು, ದೇವಾಲಯಗಳನ್ನು ನಾಶಪಡಿಸಲಾಗಿದ್ದು, ಸಾವಿರಕ್ಕೂ ಹೆಚ್ಚು ಪ್ರವೀಣ್ ತೊಗಾಡಿಯಾ ಹಿ0 ದೂ ಗಳ ಮೇಲೆ ಹಲ್ಲೆ, ದೌರ್ಜನ್ಯ ಎಸಗಲಾಗಿದೆ. ಬಾಂಗ್ಲಾದೇಶದಲ್ಲಿ ಹಿಂದೂಗಳ ಮೇಲಿನ ದೌರ್ಜನ್ಯ ತಡೆಗೆ ಕೇಂದ್ರ ಸರ್ಕಾರ ಅಗತ್ಯ ಕ್ರಮಕೈಗೊಳ್ಳಬೇಕು’ ಎಂದು ಆಗ್ರಹಿಸಿದರು.

‘ಹಿಂದೂ ಸಮಾಜದ ಜಾಗೃತಿ ಹಾಗೂ ಒಗ್ಗಟ್ಟಿಗಾಗಿ ಹಿಂದೂ ಧರ್ಮ ಸಭೆ ಮಾಡಲಾಗಿದೆ. ಪಟ್ಟಣದಲ್ಲಿ ಆಯೋಜನೆ ರಾಷ್ಟ್ರೀಯ ಬಜರಂಗದಳ ಸಂಸ್ಥಾಪಕ ಪ್ರವೀಣ ತೊಗಾಡಿಯಾ ಮುಖ್ಯ ಭಾಷಣಕಾರರಾಗಿ ಪಾಲ್ಗೊಳ್ಳಲಿದ್ದಾರೆ.ನಾಲವಾರ ಮಠದ ಶಿವಾಚಾರ್ಯರು, ಸೋಪಾನನಾಥ ಮಾಗಣಗೇರಾದ ಕೋರಿಸಿದ್ದೇಶ್ವರ ಸಿದ್ಧತೋಟೇಂದ್ರ ಗಂವ್ಹಾರದ ಶಿವಾಚಾರ್ಯರು, ವಿಶ್ವರಾಧ್ಯ



ಶಿವಾಚಾರ್ಯರು, ಆಂದೋಲಾದ ಸಿದ್ದಲಿಂಗ ಸ್ವಾಮೀಜಿ, ಕಡಕೋಳದ ರುದ್ರಮುನಿ ಶಿವಾಚಾರ್ಯರು, ಯಲಗೋಡದ ಸ್ವಾಮೀಜಿ, ಪರಮಾನಂದ ತೊನಸನಹಳ್ಳಿಯ ಮಲ್ಲಣಪ್ಪ ಸ್ವಾಮೀಜಿ, ಹೊನ್ನಾಳದ ವಾಸುದೇವ ಶಿವಯೋಗಿಗಳು, ಮಾವನೂರಿನ ಧರ್ಮರಾಯ ಮುತ್ತಾ ಸಾನ್ನಿಧ್ಯ ವಹಿಸುವರು. ಮುಖ್ಯ ಅತಿಥಿಗಳಾಗಿ ವಿಶ್ವಹಿಂದೂ ಪರಿಷತ್ ರಾಜ್ಯಾಧ್ಯಕ್ಷ ರಮೇಶ ಕುಲಕರ್ಣಿ, ರಾಜ್ಯ ಕಾರ್ಯದರ್ಶಿ ಶಂಭುನಾಥ ಅಲಬಾಳ, ಉತ್ತರ ಕರ್ನಾಟಕ ಭಜರಂಗದಳ ಅಧ್ಯಕ್ಷ ಗಂಗಾಧರ ವಿಶ್ವಕರ್ಮ ಪಾಲ್ಗೊಳ್ಳಲಿದ್ದಾರೆ. ತಾಲ್ಲೂಕಿನ ಸಮಸ್ತ ಹಿಂದೂ ಸಮಾಜದವರು, ಯುವಕರು, ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಧರ್ಮ ಸಭೆಯಲ್ಲಿ ಭಾಗವಹಿಸಬೇಕು ಎಂದು ಮನವಿ ಮಾಡಿದರು.

ಅಂತರಾಷ್ಟ್ರೀಯ ಹಿಂದೂ ಪರಿಷತ್ ವಿಭಾಗೀಯ ಅಧ್ಯಕ್ಷರು ಈಶ್ವರ ಹಿಪ್ಪರಗಿ, ತಾಲ್ಲೂಕು ಅಧ್ಯಕ್ಷ ಮಾಣಿಕ್ಯ ಕೆಲ್ಲೂರ, ಅಂತರರಾಷ್ಟ್ರೀಯ ಹಿಂದೂ ಪರಿಷತ್ ತಾಲ್ಲೂಕು ಅಧ್ಯಕ್ಷ ಚಂದ್ರಶೇಖರ ಜೈನಾಪುರ, ನಾಗರಾಜ ಓಂ, ಲಕ್ಷ್ಮೀಕಾಂತ ಕುಲಕರ್ಣಿ ಹೋತಿನಮಡು, ಹಾಜರಿದ್ದರು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
9743497111, 9743496111

# ಬಹು ನಿರೀಕ್ಷಿತ ಜಾತಿ ಜನಗಣತಿಗೆ ದೇಶದದ್ಯಾಂತ ಅಧಿಸೂಚನೆ

**ನವದೆಹಲಿ,ಜೂ.16–** ದೇಶದಲ್ಲಿ ಎರಡು ಹಂತಗಳಲ್ಲಿ ಜನ ಹಾಗೂ ಜಾತಿಗಣತಿ ನಡೆಸಲು ಕೇಂದ್ರ ಸರ್ಕಾರ ಮುಹೂರ್ತ ನಿಗದಿಪಡಿಸಿದೆ. ಮೊದಲ ಹಂತ 2026ರ ಅಕ್ಟೋಬರ್ 1 ಮತ್ತು ಎರಡನೇ ಹಂತ 2027ರ ಮಾರ್ಚ್ 1 ರಂದು ನಡೆಯಲಿದೆ ಎಂದು ಕೇಂದ್ರ ಗೃಹ ಸಚಿವಾಲಯ ಇಂದು ಅಧಿಕೃತ ಅಧಿಸೂಚನೆ ಬಿಡುಗಡೆ ಮಾಡಿದೆ.

ಕೇಂದ್ರ ಗೃಹ ಸಚಿವ ಅಮಿತ್ ಶಾ ನಿನ್ನೆಯಷ್ಟೇ ಜನಗಣತಿ ಕುರಿತು ಕೇಂದ್ರ ಗೃಹ ಕಾರ್ಯದರ್ಶಿ, ಭಾರತೀಯ ಜನಗಣತಿ ಆಯುಕ್ತ ಹಾಗೂ ರಿಜಿಸ್ಟ್ರಾರ್ ಜನರಲ್ ಮೃತ್ಯುಂಜಯ ಕುಮಾರ್ ನಾರಾಯಣನ್ ಹಾಗೂ ಇತರ ಹಿರಿಯ ಅಧಿಕಾರಿಗಳೊಂದಿಗೆ ಪರಾಮರ್ಶೆ ನಡೆಸಿದ ಬೆನ್ನಲ್ಲೇ ಇಂದು ಕೇಂದ್ರ ಸರ್ಕಾರದಿಂದ ಅಧಿಸೂಚನೆ ಹೊರಬಿದ್ದಿದೆ.

2011 ರ ನಂತರ ಮೊದಲ ಬಾರಿಗೆ ಜನಗಣತಿಯನ್ನು ಎರಡು ಹಂತಗಳಲ್ಲಿ ನಡೆಸುತ್ತಿದ್ದು ಇದರ ಜೊತೆಗೆ ಜಾತಿಗಣತಿಯನ್ನೂ ನಡೆಸಲಿದೆ. ಈ ಮೂಲಕ 1932ರ ನಂತರ ಜಾತಿ ಗಣತಿ ಮತ್ತು 2011ರ ನಂತರ ದೇಶದಲ್ಲಿ ಜನಗಣತಿ ನಡೆಯಲಿದೆ ಎಂದು ತಿಳಿಸಿದೆ. ಲಡಾಖ್ ಮತ್ತು ಜಮ್ಮು ಮತ್ತು ಕಾಶ್ಮೀರದ ಕೇಂದ್ರಾಡಳಿತ ಪ್ರದೇಶಗಳಲ್ಲಿ ಹಾಗೂ ಹಿಮಾಚಲ ಪ್ರದೇಶ ಮತ್ತು ಉತ್ತರಾಖಂಡಗಳಲ್ಲಿ 2026ರ ಅಕ್ಟೋಬರ್ 1 ಮಧ್ಯರಾತ್ರಿಯಿಂದ ಹಾಗೂ ದೇಶದ ಉಳಿದ ರಾಜ್ಯಗಳಲ್ಲಿ 2027ರ ಮಾರ್ಚ್ 1 ರಿಂದ ಜನಗಣತಿ ಆರಂಭವಾಗಲಿದೆ ಎಂದು ತಿಳಿಸಿದೆ.

ದೇಶದಲ್ಲಿ 16 ವರ್ಷಗಳ ನಂತರ ಜನಗಣತಿ ನಡೆಯಲಿದೆ. ಇದು ದೇಶದ ಮೊದಲ ಡಿಜಿಟಲ್ ಜನಗಣತಿಯಾಗಿದ್ದು, ಸ್ವತಂತ್ರ ಭಾರತದಲ್ಲಿ ಜಾತಿಗಳ ಎಣಿಕೆಯನ್ನು ಒಳಗೊಂಡ ಮೊದಲನೆಯದಾಗಿದೆ ಎಂದು ಹೇಳಿದೆ. ಎರಡು ಹಂತಗಳ ದಿನಾಂಕಗಳನ್ನು "1948ರ ಜನಗಣತಿ ಕಾಯ್ದೆಯ ಸೆಕ್ಷನ್ 3 ರ ನಿಬಂಧನೆಯ ಪ್ರಕಾರ ತಾತ್ಕಾಲಿಕವಾಗಿ ಅಧಿಕೃತ ಗೆಜೆಟ್‌ನಲ್ಲಿ ಪ್ರಕಟಿಸಲಾಗಿದೆ ಎಂದು ಮಾಹಿತಿ ಹಂಚಿಕೊಂಡಿದೆ.


ಮೊದಲ ಹಂತದಲ್ಲಿ ಮನೆಪಟ್ಟಿ ಕಾರ್ಯಾಚರಣೆ ಎಂದೂ ಕರೆಯಲ್ಪಡುವ ಮಾಹಿತಿ ಸಂಗ್ರಹದಲ್ಲಿ ಆಸ್ತಿಗಳು, ಕುಟುಂಬದ ಆದಾಯ, ವಸತಿ ಪರಿಸ್ಥಿತಿಗಳು ಮತ್ತು ಸೌಕರ್ಯಗಳಿಗೆ ಸಂಬಂಧಿಸಿದ ಡೇಟಾ ಸಂಗ್ರಹಿಸಲಾಗುತ್ತದೆ. ಮುಂಬರುವ ಜನಗಣತಿಯು ಭಾರತದ ಮೊದಲ ಡಿಜಿಟಲ್ ಜನಗಣತಿಯಾಗಿರುವುದರಿಂದ, ಮೊದಲ ಬಾರಿಗೆ ಪ್ರತಿಕ್ರಿಯಿಸುವವರು ಮನೆಯಿಂದಲೇ ಪ್ರಶ್ನೆಗಳಿಗೆ ಮಾಹಿತಿ ಕಲೆಹಾಕಲಾಗುತ್ತಿದೆ ಎಂದು ಹೇಳಿದೆ. ಎರಡನೇ ಹಂತದಲ್ಲಿ ಮನೆಯಲ್ಲಿ ವಾಸಿಸುವ ಪ್ರತಿಯೊಬ್ಬ ವ್ಯಕ್ತಿಯ ಬಗ್ಗೆ ಜನಸಂಖ್ಯಾ, ಸಾಮಾಜಿಕ–ಆರ್ಥಿಕ, ಸಾಂ ಸ್ಕೃತಿಕ ಮತ್ತು ಇತರ ವೈಯಕ್ತಿಕ ಮಾಹಿತಿ ಸಂಗ್ರಹಿಸುತ್ತದೆ. ಮೊದಲ ಬಾರಿಗೆ, ಜಾತಿ ಗಣತಿಯು ಜನಗಣತಿ ವ್ಯಾಯಾಮದ ಭಾಗವಾಗಲಿದೆ ಎಂದು ತಿಳಿಸಿದೆ

ಸಾಂವಿಧಾನಿಕ ಆದೇಶದ ಪ್ರಕಾರ, 2026 ರ ನಂತರದ ಮೊದಲ ಜನಗಣತಿಯನ್ನು ಲೋಕಸಭಾ ಕ್ಷೇತ್ರಗಳನ್ನು ಮರುವಿಂಗಡಿಸಲು ಆಧಾರವಾಗಿ ಬಳಸಬಹುದು. ಮುಂದಿನ ಸಾರ್ವತ್ರಿಕ ಚುನಾವಣೆ 2029 ರಲ್ಲಿ ನಡೆಯುವ ನಿರೀಕ್ಷೆಯಿದೆ.

2027 ರ ಜನಗಣತಿಯ ಘೋಷಣೆ ಮಹಿಳಾ ಮೀಸಲಾತಿ ಮಸೂದೆ ಮತ್ತು ವಿವಾದಾತ್ಮಕ ಲೋಕಸಭಾ ಕ್ಷೇತ್ರ ಪುನರ್ವಿಂಗಡಣೆಗೆ ದಾರಿ ಸುಗಮಗೊಳಿಸುತ್ತದೆ ಎಂದು ಹೇಳಲಾಗಿದೆ

ಜನಗಣತಿ ಜಾತಿಗಣತಿಯ ಸಂಪೂರ್ಣ ವಿವರಗಳನ್ನು ಕಲೆ ಹಾಕಿದ ನಂತರ ಅದಕ್ಕೆ ಸಂಬಂಧಿಸಿದ ಅಂಕಿ–ಅಂಶಗಳನ್ನು ಭಾರೀ ಭದ್ರತೆಯಡಿ ಸಂಗ್ರಹಿಸಲಾಗುವುದು ಎಂದು ಕೇಂದ್ರ ಸರ್ಕಾರ ಬಿಡುಗಡೆ ಮಾಡಿರುವ ಗೆಜೆಟ್ ಅಧಿಸೂಚನೆಯಲ್ಲಿ ತಿಳಿಸಿದೆ.

ಜಾತಿ ಮತ್ತು ಜನಗಣತಿ ಪ್ರಕ್ರಿಯೆಗಾಗಿ 34 ಲಕ್ಷ ಸಿಬ್ಬಂದಿ ಮತ್ತು ಮೇಲ್ವಿಚಾರಕ ಜೊತೆಗೆ 1.3 ಲಕ್ಷ ಜನಗಣತಿದಾರರು ಡಿಜಟಲ್ ಉಪಕರಣಗಳೊಂದಿಗೆ ಮಾಹಿತಿ ಸಂಗ್ರಹಿಸಲಿದ್ದಾರೆ.




## ಮುಖ್ಯಾಂಶಗಳು

* ದೇಶದಲ್ಲಿ ಎರಡು ಹಂತಗಳಲ್ಲಿ ಜನಗಣತಿ ನಡೆಸಲು ಕೇಂದ್ರ ನಿರ್ಧಾರ
* 2026ರ ಅಕ್ಟೋಬರ್ 1 ಮತ್ತು 2027ರ ಮಾರ್ಚ 1 ರಿಂದ ಎರಡು ಹಂತದಲ್ಲಿ ಆಯೋಜನೆ
* ಇದೇ ವೇಳೆ ಜನಗಣತಿ ಜೊತೆಗೆ ಜಾತಿ ಗಣತಿ ನಡೆಸಲು ತೀರ್ಮಾನ
* ಮೊದಲ ಬಾರಿಗೆ ಡಿಜಿಟಲ್ ಮೂಲಕ ಮಾಹಿತಿ ಸಂಗ್ರಹ
* ಮನೆಪಟ್ಟಿ ಕಾರ್ಯಾಚರಣೆ ಎಂದೂ ಕರೆಯಲ್ಪಡುವ ಮೊದಲ ಹಂತದಲ್ಲಿ ಆಸ್ತಿಗಳು, ಕುಟುಂಬದ ಆದಾಯ, ವಸತಿ ಪರಿಸ್ಥಿತಿಗಳು ಮತ್ತು ಸೌಕರ್ಯಗಳಿಗೆ ಸಂಬಂಧಿಸಿದ ಡೇಟಾ ಸಂಗ್ರಹ
* ಎರಡನೇ ಹಂತದಲ್ಲಿ ಪ್ರತಿಯೊಬ್ಬ ವ್ಯಕ್ತಿಯ ಬಗ್ಗೆ ಜನಸಂಖ್ಯಾ, ಸಾಮಾಜಿಕ–ಆರ್ಥಿಕ, ಸಾಂಸ್ಕೃತಿಕ ಮತ್ತು ಇತರ ವೈಯಕ್ತಿಕ ಮಾಹಿತಿ ಸಂಗ್ರಹ
* ಜನಗಣತಿ ನಂತರ 2029ರ ಲೋಕಸಭೆ ಚುನಾವಣೆಗೆ ಪೂರಕ
* ಲೋಕಸಭಾ ಕ್ಷೇತ್ರ ಪುನರ್ ವಿಂಗಡಣೆಗೂ ಸಹಕಾರಿ

# ವಿಮಾನ ದುರಂತ: ಸಿವಿಆರ್ ರೆಕಾರ್ಡರ್ ಪತ್ತೆ

**ಅಹಮದಾಬಾದ್, ಜೂ.16–** ಅಪಘಾತಕ್ಕೀಡಾದ ಸ್ಥಳದಲ್ಲಿ ಏರ್ ಇಂಡಿಯಾ ವಿಮಾನ ಎಐ 171, ಬೋಯಿಂಗ್ 787–8 ಡ್ರೀಮ್‌ಲೈನರ್‌ನ ಕಾಕ್‌ಪಿಟ್ ವಾಯ್ಸ್ ಸಿವಿಆರ್ ರೆಕಾರ್ಡರ್ ಪತ್ತೆಯಾಗಿದೆ. ಇದರಿಂದ ವಿಮಾನ ಅಪಘಾತಕ್ಕೆ ನಿಖರ ಕಾರಣ ತಿಳಿಯಲು ಸಹಕಾರಿಯಾಗಲಿದೆ.

ಈಗಾಗಲೇ ಬ್ಲಾಕ್ ಬಾಕ್ಸ್ ಪತ್ತೆಯಾಗಿದೆ. ವಿಮಾನದಲ್ಲಿದ್ದ 241 ಜನರು ಸೇರಿದಂತೆ 270 ಜನರ ಸಾವಿಗೆ ಕಾರಣವಾದ ಭೀಕರ ಅಪಘಾತದ ಹಿಂದಿನ ಸಂಭವನೀಯ ಕಾರಣ ಗುರುತಿಸಲು ಸಿವಿಆರ್ ಸಹಾಯ ಮಾಡಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ವಿಮಾನದ ಎರಡು ಅಗತ್ಯ ಬ್ಲಾಕ್ ಬಾಕ್ಸ್‌ಗಳಲ್ಲಿ ಒಂದಾದ ಕಾಕ್‌ಪಿಟ್ ವಾಯ್ಸ್ ರೆಕಾರ್ಡರ್, ವಿಮಾನ ಅಪಘಾತ ತನಿಖೆಯಲ್ಲಿ ನಿರ್ಣಾಯಕ ಸಾಧನವಾಗಿದೆ. ಅಮೆರಿಕಾ ರಾಷ್ಟ್ರೀಯ ಸಾರಿಗೆ ಸುರಕ್ಷತಾ ಮಂಡಳಿ– ಎನ್‌ಟಿಎಸ್‌ಬಿ ಪ್ರಕಾರ, ಅಪಘಾತಕ್ಕೆ ಕಾರಣವಾಗುವ ಕೊನೆಯ ಗಂಟೆಗಳು ಅಥವಾ ಕೊನೆಯ ನಿಮಿಷಗಳಲ್ಲಿ ಪೈಲಟ್ ಸಂಭಾಷಣೆಗಳು, ರೇಡಿಯೋ ಸಂವಹನಗಳು, ಅಲಾರಾಂ ಶಬ್ದಗಳು ಮತ್ತು ಸುತ್ತುವರಿದ ಹಿನ್ನೆಲೆ ಶಬ್ದಗಳು ಸೇರಿದಂತೆ ಕಾಕ್‌ಪಿಟ್‌ನಿಂದ ಆಡಿಯೊ ರೆಕಾರ್ಡಿಂಗ್‌ಗಳನ್ನು ಸಿವಿಆರ್ ಸೆರೆಹಿಡಿಯುತ್ತದೆ ಎಂದು ತಿಳಿಸಿದೆ.

ಇದಕ್ಕೂ ಮೊದಲು, ವಿಮಾನ ಅಪಘಾತ ತನಿಖಾ ಬ್ಯೂರೋ–:ಎಎಐಬಿ ಪತನಗೊಂಡ ವಿಮಾನದ ಫ್ಲೈಟ್ ಡೇಟಾ ರೆಕಾರ್ಡರ್ ಎಫ್‌ಡಿಆರ್ ಮಾತ್ರ ಪತ್ತೆಯಾಗಿದೆ ಎನ್ನುವುದನ್ನು ದೃಢಪಡಿಸಿತ್ತು. ಈಗ ಬ್ಲಾಕ್ ಬಾಕ್ಸ್ ಮತ್ತು ಕಾಕ್ ಪಿಟ್ ವಿಡಿಯೋ ರೆಕಾರ್ಡರ್ ದೊರೆತಿರುವ ಹಿನ್ನೆಲೆಯಲ್ಲಿ ವಿಮಾನ ದುರಂತಕ್ಕೆ ಕಾರಣ ತಿಳಿಯಲಿ ಸಹಕಾರಿಯಾಗಿದೆ.

ವಿಮಾನ ಅಪಘಾತ ಪ್ರಕರಣಕ್ಕೆ ಸಂಬಂಧಿಸಿದಂತೆ "ವಿಮಾನ ಅಪಘಾತ ತನಿಖಾ ಬ್ಯೂರೋ ವಿವರವಾದ ತನಿಖೆಯನ್ನು ಪ್ರಾರಂಭಿಸಿದೆ ಮತ್ತು ವಿಮಾನ ಅಮೆರಿಕನ್ ನಿರ್ಮಿತವಾಗಿರುವುದರಿಂದ ಅಂತರರಾಷ್ಟ್ರೀಯ ಪ್ರೋಟೋಕಾಲ್‌ಗಳ ಅಡಿಯಲ್ಲಿ ಸಮಾನಾಂತರ ತನಿಖೆ ನಡೆಸುತ್ತಿದೆ. ವಿಮಾನ ದತ್ತಾಂಶ ರೆಕಾರ್ಡರ್ ಮತ್ತು ಕಾಕ್‌ಪಿಟ್ ಧ್ವನಿ ರೆಕಾರ್ಡರ್ ಅನ್ನು ಪತ್ತೆಹಚ್ಚಲಾಗಿದೆ ಇದು ವಿಮಾನ ಅಪಘಾತ ಪತ್ತೆ ಹೆಚ್ಚಲು ಸಹಕಾರಿಯಾಗಲಿದೆ ಎಂದು ತಿಳಿಸಿದೆ.

ಲಂಡನ್‌ಗೆ ತೆರಳುತ್ತಿದ್ದ ವಿಮಾನ ಸರ್ದಾರ್ ವಲ್ಲಭಭಾಯಿ ಪಟೇಲ್ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಹೊರಟ ಕೆಲವೇ ಮೇಘನಿನಗರ ಪ್ರದೇಶದ ವೈದ್ಯಕೀಯ ಕಾಲೇಜಿನ ಹತ್ತಿರದ ಕ್ಯಾಂಪಸ್‌ಗೆ ಅಪ್ಪಳಿಸಿ ಸುಟ್ಟು ಕರಕಲಾಗಿತ್ತು.

ವಿಮಾನದಲ್ಲಿದ್ದ 242 ಪ್ರಯಾಣಿಕರು ಮತ್ತು ಸಿಬ್ಬಂದಿಗಳನ್ನು ಹೊರತುಪಡಿಸಿ ಎಂಬಿಬಿಎಸ್ ವಿದ್ಯಾರ್ಥಿಗಳು, 29 ಸಾರ್ವಜನಿಕರು ಸಾವನ್ನಪ್ಪಿದರು.

# ವಿಮಾನ ದುರಂತ ಸ್ಥಳಕ್ಕೆ ಭೇಟಿ ನೀಡಿದ ಡಿಸಿಎಂ ಡಿಕೆಶಿ

**ಬೆಂಗಳೂರು,ಜೂ.16–** ಗುಜರಾತ್‌ನ ಅಹಮದಾಬಾದ್‌ನಲ್ಲಿ ನಡೆದ ವಿಮಾನ ದುರಂತ ಪ್ರಕರಣದಲ್ಲಿ ನಾವು ರಾಜಕೀಯ ಮಾಡಲು ಬಯಸುವುದಿಲ್ಲ. ಅದೇನಿದ್ದರೂ ಬಿಜೆಪಿ ಹಾಗೂ ಜನತಾದಳದ ಕೆಲಸ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಲೇವಡಿ ಮಾಡಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯ ಜೊತೆ ತಾವು ಗುಜರಾತಿನ ಅಹಮದಾಬಾದ್‌ಗೆ ತೆರಳಿ ವಿಮಾನ ದುರಂತವಾದ ಸ್ಥಳವನ್ನು ಪರಿಶೀಲನೆ ನಡೆಸಿದ್ದು, ಅದೊಂದು ಭಯಾನಕ ಘಟನೆ. ದುರ್ಘಟನೆಯಾಗಬಾರದಿತ್ತು. ಯಾವ ದೇಶದಲ್ಲೂ ಇಂತಹ ಘಟನೆಗಳಾಗಬಾರದು. ಕೆಲವರ ದೇಹಗಳು ಸುಟ್ಟು ಹೋಗಿವೆ. ಆ ಸ್ಥಳವನ್ನು ನೋಡಿದರೆ ಅಬ್ಬಬ್ಬಾ ಎನ್ನುವಂತಿದೆ. ವಿಮಾನ ಇನ್ನು 500 ಮೀಟರ್ ಮುಂದೆ ಹೋಗಿದ್ದರೆ ಸಾವಿರಾರು ಜನರಿಗೆ ತೊಂದರೆಯಾಗುತ್ತಿತ್ತು. ದೊಡ್ಡ ಅನಾಹುತವೇ ಸಂಭವಿಸುತ್ತಿತ್ತು ಎಂದು ಆತಂಕ ವ್ಯಕ್ತಪಡಿಸಿದರು.



ಈಗಲೂ ಸುತ್ತಮುತ್ತಲಿನವರು ಆಘಾತದಿಂದ ಹೊರಬಂದಿಲ್ಲ. ಕೆಲವರಿಗೆ ಮಾನಸಿಕ ಆಘಾತವಾಗಿದೆ. ಜನರ ಪರಿಸ್ಥಿತಿ ಕಂಡರೆ ಆತಂಕವಾಗುತ್ತಿದೆ. ಕಾಂಗ್ರೆಸ್ ಪಕ್ಷದಿಂದ ನಾವು ಸಾಂತ್ವಾನ ಹೇಳಿದ್ದೇವೆ. ನೊಂದವರ ಪರವಾಗಿ ಪ್ರಾರ್ಥಿಸಿದ್ದೇವೆ ಎಂದರು. ವಿಮಾನದ ಬ್ಲಾಕ್‌ಬಾಕ್‌ನಲ್ಲಿನ ಸತ್ಯಾಂಶಕ್ಕಾಗಿ ನಿರೀಕ್ಷಿಸಲಾಗುತ್ತಿದೆ. ಈ ಪ್ರಕರಣದಲ್ಲಿ ನಾವು ರಾಜಕೀಯ ಮಾಡಿ ಆರೋಪ ಮಾಡುವುದಿಲ್ಲ. ಬಿಜೆಪಿಯವರು ಹಳೆಯ ವಿಚಾರಗಳನ್ನು ತಿರುಚಿ ಮಾತನಾಡಬಹುದು. ಆದರೆ ನಮಗೆ ಆ ಚರ್ಚೆ ಬೇಕಿಲ್ಲ. ನೊಂದ ಜನರಿಗೆ ನ್ಯಾಯ ಸಿಗಬೇಕು. ಕೇಂದ್ರ ಸಚಿವರು ಮತ್ತು ಡಿಜಿಸಿಐನವರು ಅಗತ್ಯವಿರುವ ಕ್ರಮಗಳನ್ನು ತೆಗೆದುಕೊಳ್ಳುತ್ತಾರೆ. ನಾವು ತಾಂತ್ರಿಕವಾಗಿ ಪರಿಣಿತರಲ್ಲ. ಹಾಗಾಗಿ ಹೆಚ್ಚಿನ ಚರ್ಚೆ ಮಾಡುವುದಿಲ್ಲ ಎಂದು ಹೇಳಿದರು. ಇದೊಂದು ಗಂಭೀರವಾದ ಘಟನೆ. ಕೇಂದ್ರ ಸರ್ಕಾರ ಗಂಭೀರವಾಗಿ ತೆಗೆದುಕೊಂಡು ಮುಂದಿನ ದಿನಗಳಲ್ಲಿ ಈ ರೀತಿ ಆಗದಂತೆ ಎಚ್ಚರಿಕೆ ವಹಿಸಬೇಕು ಎಂದರು.

# ಬೈಕ್ ಟ್ಯಾಕ್ಸಿ ಸೇವೆಯಿಂದ ಹಿಂದೆ ಸರಿದ ರಾಪಿಡೋ

**ಬೆಂಗಳೂರು,ಜೂ.16–** ರಾಜ್ಯದಲ್ಲಿ ಬೈಕ್ ಟ್ಯಾಕ್ಸಿಗಳ ನಿಯಂತ್ರಣಕ್ಕೆ ಸಂಬಂಧಿಸಿ ಕರ್ನಾಟಕ ಹೈಕೋರ್ಟ್ ಇಂದಿನಿಂದ ಜಾರಿಗೆ ಬರುವ ಆದೇಶವನ್ನು ನಾವು ಗೌರವಿಸುತ್ತೇವೆ ಎಂದು ರಾಪಿಡೋ ಘೋಷಿಸಿದೆ.

ಪ್ರಸ್ತುತ ನಡೆಯುತ್ತಿರುವ ಈ ಪ್ರಕರಣದಲ್ಲಿ ನಾವು ನೇರ ಪಕ್ಷಗಾರರಲ್ಲದಿದ್ದರೂ, ರಾಜ್ಯದ ಸಾರಿಗೆ ಪರಿಸರ ವ್ಯವಸ್ಥೆಯಲ್ಲಿ ಜವಾಬ್ದಾರಿಯುತ ಪಾಲುದಾರರಾಗಿ ನಾವು ಈ ಬೆಳವಣಿಗೆಯನ್ನು ಸೂಕ್ಷ್ಮವಾಗಿ ಗಮನಿಸುತ್ತಿದ್ದೇವೆ. ಇದು ನಮ ಕ್ಯಾಪ್ಟನ್‌ಗಳಿಗೆ ಸವಾಲಿನ ಸಮಯವಾಗಿದೆ. ಅವರಲ್ಲಿ ಅನೇಕರು ಬೈಕ್ ಟ್ಯಾಕ್ಸಿಗಳನ್ನು ತಮ ಪ್ರಮುಖ ಆದಾಯದ ಮೂಲವಾಗಿ ಅವಲಂಬಿಸಿದ್ದಾರೆ. ಕರ್ನಾಟಕದಾದ್ಯಂತ ಲಕ್ಷಾಂತರ ಪ್ರಯಾಣಿಕರಿಗೆ ಕೈಗೆಟುಕುವ, ಕೊನೆಯ ಮೈಲಿ ಸಂಪರ್ಕವನ್ನು ಒದಗಿಸುವಲ್ಲಿ ಅವರು ಮಹತ್ವದ ಪಾತ್ರ ವಹಿಸಿದ್ದಾರೆ.

ನಿಯಮಗಳಿಗೆ ಅನುಗುಣವಾಗಿ, ಸುಸ್ಥಿರ ಮತ್ತು ಭವಿಷ್ಯಕ್ಕೆ ಸಿದ್ಧವಾಗಿರುವ ನಿಯಂತ್ರಕ ಚೌಕಟ್ಟನ್ನು ರೂಪಿಸಲು ಸಾರಿಗೆ ಇಲಾಖೆ ಮತ್ತು ಕರ್ನಾಟಕ ಸರ್ಕಾರದೊಂದಿಗೆ ಸಹಯೋಗದಿಂದ ಕೆಲಸ ಮಾಡಲು ನಾವು ಬದ್ಧರಾಗಿದ್ದೇವೆ. ಪ್ರಯಾಣಿಕರ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳುವ ಜೊತೆಗೆ ಗಿಗ್ ಕಾರ್ಮಿಕರ ಹಿತಾಸಕ್ತಿಗಳನ್ನು ರಕ್ಷಿಸುವುದು ನಮ ಆದ್ಯತೆಯಾಗಿದೆ ಎಂದು ಹೇಳಿದೆ. ನಮ ಕ್ಯಾಪ್ಟನ್‌ಗಳಿಗೆ ಬೆಂಬಲ ನೀಡಲು ನಾವು ಎಲ್ಲಾ ಸಂಭಾವ್ಯ ಮಾರ್ಗಗಳನ್ನು ಸಕ್ರಿಯವಾಗಿ ಅನ್ವೇಷಿಸುತ್ತಿದ್ದೇವೆ. ಸರ್ಕಾರದೊಂದಿಗಿನ ನಮ ನಿರಂತರ ಸಂವಾದವು ಬೈಕ್ ಟ್ಯಾಕ್ಸಿಗಳು ಮತ್ತು ಅವುಗಳನ್ನು ಅವಲಂಬಿಸಿರುವ ಲಕ್ಷಾಂತರ ಗಿಗ್ ಕಾರ್ಮಿಕರಿಗೆ ಕಾರ್ಯಸಾಧ್ಯವಾದ ಚೌಕಟ್ಟಿಗೆ ದಾರಿ ಮಾಡಿಕೊಡುತ್ತದೆ ಎಂದು ಆಶಿಸುತ್ತೇವೆ ಎಂದು ರ್ಯಾಪಿಡೊ ತಿಳಿಸಿದೆ.




ಇದು ಈಗಾಗಲೇ ಹಲವಾರು ಇತರ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಅಸ್ತಿತ್ವದಲ್ಲಿದೆ. ಎಲ್ಲಾ ಪಾಲುದಾರರ ಹಿತದೃಷ್ಟಿಯಿಂದ ನಾವು ಅಧಿಕಾರಿಗಳೊಂದಿಗೆ ನಮ ರಚನಾತಕ ಸಂವಾದವನ್ನು ಮುಂದುವರಿಸುವಾಗ, ನಮ ಕ್ಯಾಪ್ಟನ್‌ಗಳು ಮತ್ತು ಬಳಕೆದಾರರು ನಮೊಂದಿಗೆ ಸಹಕರಿಸಬೇಕೆಂದು ನಾವು ವಿನಂತಿಸುತ್ತೇವೆ. ಸಾರಿಗೆ ಇಲಾಖೆ ಮತ್ತು ಕರ್ನಾಟಕ ಸರ್ಕಾರದೊಂದಿಗೆ ಸಹಕರಿಸಿ, ನಿಯಮಾನುಸಾರ, ಸುಸ್ಥಿರ ಮತ್ತು ಭವಿಷ್ಯಕ್ಕೆ ಸಿದ್ಧವಾಗಿರುವ ನಿಯಂತ್ರಣ ಚೌಕಟ್ಟನ್ನು ರೂಪಿಸಲು ನಾವು ಬದ್ಧರಾಗಿದ್ದೇವೆ. ಗಿಗ್ ವರ್ಕರ್‌ಗಳ ಹಿತಾಸಕ್ತಿಗಳ ರಕ್ಷಿಸುವುದರ ಜೊತೆಗೆ ಪ್ರಯಾಣಿಕರ ಸುರಕ್ಷತೆ ಆದ್ಯತೆಯಾಗಿಡುವುದು ನಮ ಮುಖ್ಯ ಗುರಿಯಾಗಿದೆ ಎಂದು ಅದು ಹೇಳಿದೆ.

# ಇಸ್ರೇಲ್, ಇರಾನ್ ಸಂಘರ್ಷ ಅಪಾರ ಸಾವು –ನೋವು

**ಟೆಹ್ರಾನ್, ಜೂ.16–** ಆಪರೇಷನ್ ರೈಸಿಂಗ್ ಲಯನ್ ಬಳಿಕ ಇಸ್ರೇಲ್–ಇರಾನ್ ನಡುವಿನ ಸಂಘರ್ಷ ತೀವ್ರಗೊಂಡಿದ್ದು ಇರಾನ 170ಕ್ಕೂ ಹೆಚ್ಚು ಸ್ಥಳಗಳ 720 ಸೇನಾ ಶಿಬಿರಗಳ ಮೇಲೆ ಇಸ್ರೇಲ್ ವಾಯು ದಾಳಿ ನಡೆಸಿ ಪ್ರತೀಕಾರ ತೀರಿಸಿಕೊಂಡಿದ್ದು ಅಪಾರ ಪ್ರಮಾಣದ ಹಾನಿ ಯಾಗಿದೆ.

ಇಸ್ರೇಲ್ ನಡೆಸಿದ ದಾಳಿಯಲ್ಲಿ 224 ಮಂದಿ ಸಾವನ್ನಪ್ಪಿದ್ದಾರೆ, 1,277 ಜನರು ಗಾಯಗೊಂಡಿದ್ದಾರೆ. ಅದೇ ವೇಳೆ ಇರಾನ್ ಪ್ರತಿಯಾಗಿ ನಡೆಸಿದ ದಾಳಿಯಲ್ಲಿ 14 ಇಸ್ರೇಲ್ ನಾಗರಿಕರು ಸೇರಿ 390 ಮಂದಿ ಸಾವನ್ನಪ್ಪಿದ್ದಾರೆ ಉನ್ನತ ಮೂಲಗಳು ಖಚಿತ ಪಡಿಸಿವೆ.



# ಐತಿಹಾಸಿಕ ಸ್ಥಳಗಳ ಮಾಹಿತಿ ನೀಡಲು ಮನವಿ

**ಕಲಬುರಗಿ,ಜೂ.16–** ಪ್ರವಾಸೋದ್ಯಮ ಇಲಾಖೆಯಿಂದ ಪ್ರವಾಸಿಗರಿಗೆ ಉತ್ತಮ ಸೇವೆ ನೀಡುವ ನೀಟ್ಟಿನಲ್ಲಿ ಹಾಗೂ ಸ್ವ–ಉದ್ಯೋಗ ಪ್ರವಾಸಿ ವಾಹನ ಕಾರ್ ಟ್ಯಾಕ್ಸಿ ಚಾಲನೆಯ ಮೂಲಕ ಜೀವನ ಬದುಕು ಕಟ್ಟಿಕೊಳ್ಳಲು ತರಬೇತಿ, ಮಾರ್ಗದರ್ಶನ ಹಾಗೂ ಯೋಜನೆಯ ಕುರಿತು ಪ್ರಚಾರ ಕೈಗೊಳ್ಳಲುವುದು ಅಗತ್ಯವಾಗಿದೆ ಎಂದು ಕಲಬುರಗಿ ಜಿಲ್ಲಾ ಚಾಲಕರ ಸಂಘವು ಇಲ್ಲಿನ ಎಲ್ಲಾ ಚಾಲಕರಿಗೆ ಪ್ರವಾಸಿಗರ ಸುರಕ್ಷತೆ ಕುರಿತು ಮಾಹಿತಿ ಮಾರ್ಗದರ್ಶನ ತರಬೇತಿ ನೀಡಬೇಕು ಸಚಿವರಿಗೆ ಮನವಿ ಸಲ್ಲಿಸಲಾಯಿತು.

ಪ್ರವಾಸೋದ್ಯಮ ಇಲಾಖೆಯ ಮೂಲಕ ಕಲಬುರಗಿ ಜಿಲ್ಲಾ ಚಾಲಕರ ಸಂಘ ಕ್ಕೆ ಅನುಮೋದನೆ ಹಾಗೂ ಈ ಇಲಾಖೆಯ ಸೌಲಭ್ಯಗಳು ಸರಳವಾಗಿ ಒದಗಿಸಬೇಕು. ಪ್ರವಾಸೋದ್ಯಮ ಇಲಾಖೆಯ ಸಮಿತಿಯು ಸಾರಿಗೆ ಇಲಾಖೆ ಮತ್ತು ಸಂಚಾರಿ ಪೊಲಿಸ್, ಆರೋಗ್ಯ ಇಲಾಖೆಯ ಒಳಗೊಂಡತೆ ಕಲಬುರಗಿ ಜಿಲ್ಲಾ ಚಾಲಕರ ಸಂಘದ ನಾಮ ನಿರ್ದೇಶನ ಮಾಡಬೇಕು. ಕಲಬುರಗಿ ನಗರದ ಪ್ರಮುಖ ಸ್ಥಳಗಳಲ್ಲಿ ಹಾಗೂ ಹೊರವಲಯ ರಿಂಗ ರೋಡಗಳಲ್ಲಿ ಜಿಲ್ಲೆಯ ಐತಿಹಾಸಿಕ ಸ್ಥಳಗಳ ಚಿತ್ರಗಳ ಬ್ಯಾನರ್ ಹೋಲ್ಡಿಂಗಸ್–ಫಲಕ ಲಗತ್ತಿಸಬೇಕು. ಕೈಪಿಡಿ ಪ್ರಕಟಣೆ ಮಾಡಿ ಹಂಚಬೇಕು. ರಾಜ್ಯದಿಂದ ಆಂದ್ರಪ್ರದೇಶ, ತೆಲಂಗಾಣ, ತಮಿಳನಾಡು, ಗೋವಾ, ಕೇರಳ, ಮಹಾರಾಷ್ಟ ರಾಜ್ಯಗಳಿಗೆ ಪ್ರವಾಸಿ ವಾಹನ ಕಾರ್ ಟ್ಯಾಕ್ಸಿ ಹೋಗಿ ಬರಲು ತೆರೆಗೆಯನ್ನು ಕಡಿಮೆ ಮಾಡಬೇಕು ಈ ಮೂಲಕ ಕಾರ್ ಟ್ಯಾಕ್ಸಿ ಪ್ರವಾಸಿಗರಿಗೆ ರಾಜ್ಯ ವಿವಿಧ ಸ್ಥಳಗಳಿಗೆ ಭೇಟಿ ಕೊಡಲು ಸರಳಿಕರಣ ಗೊಳಿಸಬೇಕು.

ಕಲ್ಯಾಣ ಕರ್ನಾಟಕದ ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಈ ಐತಿಹಾಸಿಕ ಸ್ಥಳಗಳ ಭೇಟಿಗೆ ಪ್ರವಾಸೋದ್ಯಮ ಇಲಾಖೆಯ ಮೂಲಕ ಸೂಕ್ತ ಮಾಹಿತಿ ಮಾರ್ಗದರ್ಶನದ ಕೈಪಿಡಿ–ಕ್ಯಾಲೇಂಡರ್ ಉಚಿತವಾಗಿ ನೀಡುವ ಯೋಜನೆ ರೂಪಿಸಿ, ಶೈಕ್ಷಣಿಕ ಪ್ರವಾಸಿ ಪೂರ್ವ ಮಾಹಿತಿಯನ್ನು ಶಾಲಾ ಕಾಲೇಜು ಮಕ್ಕಳಿಗೆ ನೀಡಬೇಕು.



ಕಲ್ಯಾಣ ಕರ್ನಾಟಕ ಸ್ವಯಂ ಉದ್ಯೋಗಿ ಕಾರ್ ಟ್ಯಾಕ್ಸಿ–ಚಾಲಕರ ಸಂಘದ ಪದಾಧಿಕಾರಿಗಳ ಸಭೆಯನ್ನು ಕರೆದು, ಪ್ರವಾಸಿ ವಾಹನ ಚಾಲಕರ ದುಂಡು ಮೇಜಿನ್ ಸಭೆಯನ್ನು ಆಯೋಜಿಸುವಂತೆ ಮನವಿ.ಈ ಮೇಲ್ಕಂಡ ಎಲ್ಲಾ ಅಂಶಗಳನ್ನು ಪರೀಶಿಲಿಸಿ ಕಾರ್ ಟ್ರಾಕ್ಸಿ ಸಂಘಗಳಿಗೆ ಹಾಗೂ ಪ್ರವಾಸಿಗಳಿಗೆ ಅನುಕೂಲಕರ ವ್ಯವಸ್ಥೆ ರೂಪಿಸಬೇಕೆಂದು ಕಲಬುರಗಿ ಜಿಲ್ಲಾ ಚಾಲಕರ ಸಂಘ (ರಿ) ಅಧ್ಯಕ್ಷ ಚಂದ್ರಶೇಖರ, ಪ್ರವಾಸಿ ಮಾರ್ಗದರ್ಶಿ ಪ್ರಶಿಕ್ಷಾರ್ಥಿಗಳು, ಇತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಅಹಮದಾಬಾದ ವಿಮಾನ ದುರಂತದಲ್ಲಿ ಅಗಲಿದ ನಾಗರಿಕರಿಗೆ ಶ್ರದ್ಧಾಂಜಲಿ

**ಕಲಬುರಗಿ,ಜೂ.16–** ಅಹಮದಾಬಾದ್ ವಿಮಾನ ದುರಂತದಲ್ಲಿ ಹಲವು ಮಂದಿ ಸಾವನ್ನಪ್ಪಿದ್ದು, ಈ ಹಿನ್ನೆಲೆಯಲ್ಲಿ ಯುವ ಕಾಂಗ್ರೆಸ್ ಸಮಿತಿಯ ವತಿಯಿಂದ ನಗರದ ಸೇಡಂ ರಸ್ತೆಯ ಜಿಲ್ಲಾ ಕಾಂಗ್ರೆಸ್ ಸಮಿತಿ ಕಚೇರಿಯಲ್ಲಿ ಆಯೋಜಿಸಿದ್ದ ಸಂತಾಪ ಸೂಚಕ ಸಭೆಯಲ್ಲಿ ಅಗಲಿದ ವಿಮಾನ ಪ್ರಯಾಣಿಕರಿಗೆ ಮತ್ತು ಇತರ ನಾಗರಿಕರಿಗೆ ಶ್ರದ್ಧಾಂಜಲಿ ಸರ್ಮಪಿಸಲಾಯಿತು.

ಶ್ರದ್ಧಾಂಜಲಿಯಲ್ಲಿ ರಾಧಾಕೃಷ್ಣ ದೊಡ್ಡಮನಿ (ಸಂಸದರು, ಕಲಬುರಗಿ ಲೋಕಸಭೆ), ಮಂಜುನಾಥ ಎಚ್ ಎಸ್ ಜಿ (ಅಧ್ಯಕ್ಷರು, ಭಾರತೀಯ ಯುವ ಕಾಂಗ್ರೆಸ್ ಕರ್ನಾಟಕ) ನಿಗಮ ಭಂಡಾರಿ ಜಿ (ಉಸ್ತುವಾರಿ, ಯುವ ಕಾಂಗ್ರೆಸ್ ಕರ್ನಾಟಕ) ಅಬ್ದುಲ್ ದೇಸಾಯಿ ಜಿ (ಯುತ್ ಕಾಂಗ್ರೆಸ್ ಕಲಬುರಗಿ ಉಸ್ತುವಾರಿ) ಜನಾಬ್ ಮಝುರ್ ಖಾನ್ (ಅಧ್ಯಕ್ಷರು, ಕೆಯುಡಿಎ) ಡಾ.ಕಿರಣ ದೇಶಮುಖ ಯುವ ಕಾಂಗ್ರೆಸ್ ಅಧ್ಯಕ್ಷ ಶಕೀಲ್ ಅಹ್ಮದ್ ಸರಡಗಿ, ಈರಣ್ಣ



ಪಾಟೀಲ್ ಝುಲ್ಕಿ, ಶಿವಾನಂದ ಹೊಂಗುಂಟಿ. ಚೇತನ್ ಗೋನಾಯ್ಕ್ ಶರ್ನು ವಾರದ್. ಪಕ್ಷದ ಪದಾಧಿಕಾರಿಗಳಾದ ಕಾರ್ತಿಕ್ ನಾಟಿಕರ್, ರಾಖೀಬ್ ಉಮರ್ ಜುನೈದಿ ತಂಝಿಲ್ ಫರಾಜ್ ಏಜಾಜ್ ನಿಂಬಾಳ್ಕರ್ ರಾಜು ಮಾಡಗಿ ಆಸ್ವಾನ್ ಗಣೇಶ ನಾಗನಹಳ್ಳಿ ಸಂಗಪಾಲ್ ರಾಮಪ್ರಸಾದ್ ಶರ್ಫುದ್ದೀನ್ ಅಸ್ಲಂ ಸಿಂದಗಿ ಸೇರಿದಂತೆ ಪಕ್ಷದ ಇತರ ಮುಖಂಡರು ಹಾಗೂ ಕಾರ್ಯಕರ್ತರು ಸಭೆಯಲ್ಲಿ ಭಾಗವಹಿಸಿದ್ದರು.

ಯುವ ಮಾರ್ಗ

ಮಂಗಳವಾರ : 17–06–2025

## ಸಮಗ್ರ ಶಿಕ್ಷಣ ಅಭಿಯಾನ: ವಿವಿಧ ಹುದ್ದೆಗಳಿಗೆ ಅರ್ಜಿ ಆಹ್ವಾನ

**ರಾಯಚೂರ,ಜೂ.16**ಸಮನ್ವಯ ಶಿಕ್ಷಣ ವಿಭಾಗದಡಿ 2025–26ನೇ ಶೈಕ್ಷಣಿಕ ಸಾಲಿಗೆ ಖಾಲಿ ಇರುವ ಬಿಐಇಆರ್‌ಟಿ ಪ್ರಾಥಮಿಕ ವಿವಿಧ ತಾತ್ಕಾಲಿಕ ಹುದ್ದೆಗಳಿಗೆ ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಸಮಗ್ರ ಶಿಕ್ಷಣ ಅಭಿಯಾನದ ಉಪನಿರ್ದೇಶಕರು ತಿಳಿಸಿದ್ದಾರೆ.

ಪ್ರಾಥಮಿಕ (1 –5) ಡಿ. ಎಡ್ ವಿಶೇಷ ಶಿಕ್ಷಣ(ಆರ್‌ಸಿಐ ಸಿಆರ್‌ಆರ್ ಸಂಖ್ಯೆಯೊಂದಿಗೆ), ಪ್ರೌಢ (6 ರಿಂದ 8) ಬಿ.ಎಡ್ ವಿಶೇಷ ಶಿಕ್ಷಣ(ಆರ್‌ಸಿಐ ಸಿಆರ್‌ಆರ್ ಸಂಖ್ಯೆಯೊಂದಿಗೆ) ಮತ್ತು ಪ್ರೌಢ (9 ರಿಂದ 12) ಬಿ.ಎಡ್ ವಿಶೇಷ

ಶಿಕ್ಷಣ(ಆರ್‌ಸಿಐ ಸಿಆರ್‌ಆರ್ ಸಂಖ್ಯೆಯೊಂದಿಗೆ) ಹುದ್ದೆಗಳಿಗೆ ತಾತ್ಕಾಲಿಕವಾಗಿ ನೇರಗುತ್ತಿಗೆ ಅಡಿ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಗಳನ್ನು 18–6–2025 ರೊಳಗಾಗಿ ಉಪನಿರ್ದೇಶಕರು ಮತ್ತು ಪದನಿಮಿತ್ತ ಜಿಲ್ಲಾ ಯೋಜನಾ ಸಮನ್ವಯಾಧಿಕಾರಿಗಳು, ಸಮಗ್ರ ಶಿಕ್ಷಣ ಕರ್ನಾಟಕ, ರಾಯಚೂರು ಇವರಿಗೆ ಅರ್ಜಿ ಸಲ್ಲಿಸಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹೆಣದ ಮೇಲೆ ಬಿಜೆಪಿ ರಾಜಕೀಯ:ಡಿಕೆಶಿ ಕಿಡಿ

**ಬೆಂಗಳೂರು, ಜೂ.16**–ನಾವು ಅಹಮದಾಬಾದ್ ವಿಮಾನ ದುರಂತದ ಬಗ್ಗೆ ರಾಜಕೀಯ ಮಾಡೋದಿಲ್ಲ. ಹೆಣದ ಮೇಲೆ ರಾಜಕೀಯ ಮಾಡುವುದು ಏನಿದ್ದರೂ ಬಿಜೆಪಿ ಹಾಗೂ ಜೆಡಿಎಸ್ ಕೆಲಸ. ನಾವು ಅವರಂತೆ ನೀಚ ರಾಜಕೀಯ ಮಾಡುವುದಿಲ್ಲ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತರಾಟೆಗೆ ತೆಗೆದುಕೊಂಡಿದ್ದಾರೆ.

ಸದಾಶಿವನಗರ ನಿವಾಸದ ಬಳಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು,ವಿಮಾನ ಅಪಘಾತದಂತಹ ದುರಂತ ದೇಶದಲ್ಲಿ ಮಾತ್ರವಲ್ಲ ಪ್ರಪಂಚದಲ್ಲಿ ಎಲ್ಲಿಯೂ ನಡೆಯಬಾರದು. ಈ ದುರಂತದಲ್ಲಿ ಅನೇಕರು ಸುಟ್ಟುಹೋಗಿದ್ದಾರೆ. ಆ ದುರಂತದ ಸ್ಥಳ ನೋಡಿದರೆ ಆಘಾತವಾಗುತ್ತದೆ. ಅಕಸ್ಮಾತ್ 500 ಮೀಟರ್ ಮುಂದಕ್ಕೆ ಹೋಗಿ ವಿಮಾನ ಅಪ್ಪಳಿಸಿದ್ದರೂ ಸಾವಿರಾರು ಮಂದಿಯ ಜೀವಹಾನಿಯಾಗುತ್ತಿತ್ತು ಎಂದರು.

ವಿಮಾನ ಪತನಗೊಂಡು ವೈದ್ಯಕೀಯ ಹಾಸ್ಟೆಲ್ ವಿದ್ಯಾರ್ಥಿಗಳು ಗಾಯಗೊಂಡಿದ್ದಾರೆ. ಕೆಲವು ವಿದ್ಯಾರ್ಥಿಗಳಿಗೆ ಮಾನಸಿಕ ಆಘಾತವಾಗಿದೆ. ಮಲ್ಲಿಕಾರ್ಜುನ ಖರ್ಗೆ ಅವರ ನೇತೃತ್ವದಲ್ಲಿ ನಾವು ಕೆಲವರನ್ನು ಭೇಟಿ ಮಾಡಿ ಮಾತನಾಡಿದೆವು. ಈ ಅಪಘಾತ ಕುರಿತು ಬ್ಲಾಕ್ ಬಾಕ್ಸ್ ತನಿಖೆ ವರದಿ ಬರಬೇಕಾಗಿದೆ. ಕಾಂಗ್ರೆಸ್ ಪಕ್ಷದ ವತಿಯಿಂದ ಅಲ್ಲಿ ಹೋಗಿ ಸಾಂತ್ವನ ಹೇಳಿದ್ದೇವೆ” ಎಂದು ಮಾಹಿತಿ ನೀಡಿದರು.

ಬಿಜೆಪಿ ಹಾಗೂ ಜೆಡಿಎಸ್ ನವರಿಗೆ ಹೆಣದ ಮೇಲೆ ರಾಜಕೀಯ ಮಾಡುವುದೇ ಕೆಲಸ. ನಾವು ಹಳೇ ಪ್ರಕರಣ ಹಾಗೂ ಈ ಪ್ರಕರಣವನ್ನು ಮುಂದಿಟ್ಟು ಕೊಂಡು ಟೀಕೆ ಮಾಡಬಹುದು. ಆದರೆ ನಾವು ಅವರ ಮಟ್ಟಕ್ಕೆ ಇಳಿಯುವುದಿಲ್ಲ. ಈ ವಿಚಾರದಲ್ಲಿ ಅನೇಕ ತಾಂತ್ರಿಕ ಅಂಶಗಳಿವೆ. ನಾನು ಅವುಗಳ ತಜ್ಞನಲ್ಲ. ಈ ಎಲ್ಲಾ ವಿಚಾರವಾಗಿ ಚರ್ಚೆ ಆಗುತ್ತಿದೆ. ಆದರೆ ಈ ವಿಚಾರವನ್ನು ರಾಜಕೀಯಗೊಳಿಸುವ ವ್ಯಕ್ತಿ ನಾನಲ್ಲ. ಈ ಸಮಯದಲ್ಲಿ ಕೇಂದ್ರ ಸಚಿವರ ಬಗ್ಗೆ ಟೀಕೆ ಮಾಡುವುದಿಲ್ಲ. ಇದು ದೇಶದ ಗಂಭೀರ ವಿಚಾರ” ಎಂದು ತಿಳಿಸಿದರು.

ರಾಜ್ಯ ಸರ್ಕಾರ ವಸೂಲಿ ಮಾಡುತ್ತಿರುವ ತೆರಿಗೆ ನೋಡಿದರೆ ನನ್ನ ಸರ್ಕಾರ ಇದ್ದಿದ್ದರೆ ಗೃಹಲಕ್ಷ್ಮಿಗೆ 5 ಸಾವಿರ ಕೊಡುತ್ತಿದ್ದೆ ಎಂಬ ಕುಮಾರಸ್ವಾಮಿ ಅವರ ಹೇಳಿಕೆಗೆ, ಬಹಳ ಸಂತೋಷ. ಅವರು ಚೆನ್ನಾಗಿ ಆರೋಗ್ಯಕರವಾಗಿರಲಿಎಂದು ಹೇಳಿದರು.

## 3 ಮಹಿಳಾ ನಕ್ಸಲರು ಸೇರಿ ನಾಲ್ವರು ನಕ್ಸಲರ ಹತ್ಯೆ

**ಬಾಲಘಾಟ್ ,ಜೂ.16**–ಮಧ್ಯಪ್ರದೇಶದ ಬಾಲಘಾಟ್ ಜಿಲ್ಲೆಯಲ್ಲಿ ಶನಿವಾರ ನಡೆದ ಪ್ರಮುಖ ಕಾರ್ಯಾಚರಣೆಯಲ್ಲಿ, ಭದ್ರತಾ ಪಡೆಗಳು ನಾಲ್ವರು ಶಸ್ತ್ರಸಜ್ಜಿತ ನಕ್ಸಲರನ್ನು ಎನ್‌ಕೌಂಟರ್‌ನಲ್ಲಿ ಹತ್ಯೆಗೈದಿದ್ದಾರೆ. ಕೊಲ್ಲಲ್ಪಟ್ಟ ನಕ್ಸಲರಲ್ಲಿ ಒಬ್ಬ ಪುರುಷ ಮತ್ತು ಮೂವರು ಮಹಿಳೆಯರು ಸೇರಿದ್ದಾರೆ. ಬಿಟ್ಲಿ ಪೊಲೀಸ್ ಠಾಣೆ ಪ್ರದೇಶದ ಪಚಮಾ ದಾದರ್‌ನ ಗುಡ್ಡಗಾಡು ಪ್ರದೇಶದಲ್ಲಿ ಈ ಎನ್‌ಕೌಂಟರ್ ನಡೆದಿದೆ.

ಸ್ಥಳದಿಂದ ಶಸ್ತ್ರಾಸ್ತ್ರಗಳ ಸಂಗ್ರಹವನ್ನು ವಶಪಡಿಸಿಕೊಳ್ಳಲಾಗಿದೆ ಎಂದು ವಿಶೇಷ ಡಿಜಿ ನಕ್ಸಲ್ ಪಂಕಜ್ ಶ್ರೀವಾಸ್ತವ ಮಾಹಿತಿ ನೀಡಿದ್ದಾರೆ, ಇದರಲ್ಲಿ ರಾಕೆಟ್ ಲಾಂಚರ್, ಹ್ಯಾಂಡ್ ಗ್ರೆನೇಡ್‌ಗಳು, .315 ಬೋರ್ ರೈಫಲ್ ಮತ್ತು ದೊಡ್ಡ ಪ್ರಮಾಣದ ಕಾರ್ಟ್ರಿಡ್ಜ್‌ಗಳು ಸೇರಿವೆ. ಆದಾಗ್ಯೂ, ಎನ್‌ಕೌಂಟರ್ ಸಮಯದಲ್ಲಿ ಕೆಲವು ನಕ್ಸಲರು ಪರಾರಿಯಾಗಿದ್ದಾರೆ, ಅವರನ್ನು ಸೆರೆ ಹಿಡಿಯಲು ತೀವ್ರ ಶೋಧ ಕಾರ್ಯಾಚರಣೆ ನಡೆಯುತ್ತಿದೆ.

ಮಳೆಯ ಹೊರತಾಗಿಯೂ, ಭದ್ರತಾ ಪಡೆಗಳ ಕಾರ್ಯಾಚರಣೆ ಮುಂದುವರೆದಿದೆ. ಇದು ಮಧ್ಯಪ್ರದೇಶದಲ್ಲಿ ಇದುವರೆಗಿನ ಅತಿದೊಡ್ಡ ನಕ್ಸಲ್ ಎನ್‌ಕೌಂಟರ್ ಆಗಿದ್ದು, ಒಂದೇ ವರ್ಷದಲ್ಲಿ ಕೊಲ್ಲಲ್ಪಟ್ಟ ನಕ್ಸಲರ ಸಂಖ್ಯೆ ಎರಡು ಅಂಕೆಗಳನ್ನು ತಲುಪಿದೆ. ಇದಕ್ಕೂ ಮೊದಲು, ಯಾವುದೇ ವರ್ಷದಲ್ಲಿ ಕೊಲ್ಲಲ್ಪಟ್ಟ ಗರಿಷ್ಠ ನಕ್ಸಲರ ಸಂಖ್ಯೆ ಆರು ಆಗಿತ್ತು, ಆದರೆ ಈ ವರ್ಷ ಈ ಅಂಕಿ ಅಂಶವನ್ನು ಕೇವಲ ಐದು ತಿಂಗಳಲ್ಲಿ ದಾಟಲಾಗಿದೆ.

## ಮಹಾರಾಣಾ ಪ್ರತಾಪಸಿಂಹರ ಹೆಸರು ಅಜರಾಮರ: ಮಾನಪ್ಪ ವಜ್ಜಲ್

ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಜೂ.16**–ಮಹಾರಾಣಾ ಪ್ರತಾಪ ಸಿಂಹರ ಧೈರ್ಯ, ಶೌರ್ಯ, ಸಾಹಸ ಅಪ್ರತಿಮವಾದದ್ದು, ಸೂರ್ಯ ಚಂದ್ರರು ಇರುವ ತನಕ ಮಹಾರಾಣಾ ಪ್ರತಾಪಸಿಂಹರ ಹೆಸರು ಅಜರಾಮರವಾಗಿರುತ್ತದೆ ಎಂದು ಶಾಸಕ ಮಾನಪ್ಪ ವಜ್ಜಲ್ ಹೇಳಿದರು.

ಪಟ್ಟಣದಲ್ಲಿ ತಾಲೂಕು ರಜಪೂತ ಸಮಾಜದವರು ಹಮ್ಮಿಕೊಂಡ ವೀರಪುರುಷ ಮಹಾರಾಣಾ ಪ್ರತಾಪ ಸಿಂಹರ 485ನೇ ಜಯಂತ್ಯೋತ್ಸವ ಉದ್ಘಾಟಿಸಿ ಮಾತನಾಡಿದ ಅವರು, ಯುದ್ಧದಲ್ಲಿ ಸೋತರೂ ಎದೆಗುಂದದೆ ಹೋರಾಡುತ್ತಿದ್ದರು. ಅವರ ಸ್ವಾಭಿಮಾನ ಮತ್ತು ಪರಾಕ್ರಮದ ಬದುಕು ಸದಾ ಆದರ್ಶಪ್ರಾಯವಾಗಿದೆ ಎಂದರು.

ವಿಧಾನ ಪರಿಷತ್ ಸದಸ್ಯ ಶರಣಗೌಡ ಬಯ್ಯಾಪುರ ಮಾತನಾಡಿ ರಜಪೂತ ಸಮಾಜ ಸ್ವಾಭಿಮಾನದ ಸಂಕೇತವಾಗಿದೆ. ಮಹಾರಾಣಾ ಪ್ರತಾಪ




ಸಿಂಹರ ಹೋರಾಟದ ಬದುಕು ಸ್ಮರಿಸಿದರು. ಎಸ್.ಎಸ್.ಎಲ್.ಸಿ ಮತ್ತು ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಉತ್ತಮ ಅಂಕಗಳು ಪಡೆದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನಿಸಿ ಗೌರವಿಸಲಾಯಿತು.

ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಭೂಪನಗೌಡ ಕರಡಕಲ್, ಜಿ.ಪಂ ಮಾಜಿ ಅಧ್ಯಕ್ಷ ಗುಂಡಪ್ಪ ನಾಯಕ, ಬಿಜೆಪಿ ಜಿಲ್ಲಾಧ್ಯಕ್ಷ ವೀರನಗೌಡ ಲೆಕ್ಕಿಹಾಳ, ಸೋಮಶೇಖರ ಐದನಾಳ, ವೆಂಕನಗೌಡ ಪಾಟೀಲ, ರಜಪೂತ ತಾಲೂಕು ಅಧ್ಯಕ್ಷ ಸುಧೀರಕುಮಾರ ಶ್ರೀವಾಸ್ತವ್, ಉಪಾಧ್ಯಕ್ಷ ಸುಭಾಷ್ ಸಿಂಗ್ ಬ್ಯಾಳಿ, ಪ್ರಧಾನ ಕಾರ್ಯದರ್ಶಿ ದುರ್ಗಾ ಸಿಂಗ್, ಮಹಿಳಾ ಘಟಕದ ಅಧ್ಯಕ್ಷೆ ಶ್ರೀಮತಿ ರೇಖಾಬಾಯಿ ದಶರಥ ಸಿಂಗ್, ಖಜಾಂಚಿ ರಾಜೇಂದ್ರಸಿಂಗ್ ಹಜೇರಿ, ಶಿವರಾಜ್ ಸಿಂಗ್, ಮೋಹನಸಿಂಗ್ ಮುದಗಲ್, ರಮೇಶಸಿಂಗ್ ಹಟ್ಟಿ, ಮಾಜಿ ಅಧ್ಯಕ್ಷ ದಶರಥ ಸಿಂಗ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಕಾರ್ಯಕ್ರಮಕ್ಕೂ ಮುನ್ನ ದೊಡ್ಡ ಹನುಮಂತ ದೇವರ ದೇವಸ್ಥಾನದಿಂದ ರಜಪೂತ ಸಮಾಜದ ಸಾಂಸ್ಕೃತಿಕ ಭವನದವರೆಗೆ ಮಹಾರಾಣಾ ಪ್ರತಾಪಸಿಂಹರ ಭಾವಚಿತ್ರದ ಭವ್ಯ ಮೆರವಣಿಗೆ ಜರುಗಿತು.

## ಇಂದು ಮಾನ್ವಿ ನಗರದಲ್ಲಿ ವಿದ್ಯುತ್ ಪೂರೈಕೆಯಲ್ಲಿ ಅಡಚಣೆ

**ಮಾನ್ವಿ,ಜೂ.16**–ಪಟ್ಟಣದ 110/11 ಕೆ.ವಿ. ವಿದ್ಯುತ್ ವಿತರಣಾ ಕೇಂದ್ರದಲ್ಲಿ 110/11 ಕೆ.ವಿ. ಹಾಗೂ 20 ಎಮ್.ವಿ.ಎ. ಎರಡು ಪವರ್ ಟ್ರಾನ್ಸಫಾರ್ಮರ್‌ಗಳ ತುರ್ತು ದುರಸ್ತಿ ಕಾಮಗಾರಿ ಹಿನ್ನೆಯಲ್ಲಿ ಜೂ.17 ರಂದು ಬೆಳಿಗ್ಗೆ 9 ರಿಂದ ಸಂಜೆ 6 ಗಂಟೆವರೆಗೆ ಮಾನ್ವಿ ನಗರದಲ್ಲಿ ಹಾಗೂ ವಿತರಣಾ ಕೇಂದ್ರದಿಂದ ವಿದ್ಯುತ್ ಪೂರೈಕೆಯಾಗುವ ಗ್ರಾಮಗಳಲ್ಲಿ ವಿದ್ಯುತ್ ಪೂರೈಕೆಯಲ್ಲಿ ಅಡಚಣೆ ಉಂಟಾಗಲಿದೆ ಎಂದು ಜೆಸ್ಕಾಂ ಇಲಾಖೆಯ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಾದ ವೈದ್ಯಾನಾಥ ಸ್ವಾಮಿ ಪ್ರಕಟಣೆಯ ಮೂಲಕ ತಿಳಿಸಿದ್ದಾರೆ.

## 2 ಹಂತಗಳಲ್ಲಿ ಜನ–ಜಾತಿಗಣತಿ

**ನವದೆಹಲಿ,ಜೂ.16**– ದೇಶದಲ್ಲಿ ಎರಡು ಹಂತಗಳಲ್ಲಿ ಜನ ಹಾಗೂ ಜಾತಿಗಣತಿ ನಡೆಸಲು ಕೇಂದ್ರ ಸರ್ಕಾರ ಮುಹೂರ್ತ ನಿಗದಿಪಡಿಸಿದೆ. ಮೊದಲ ಹಂತ 2026ರ ಅಕ್ಟೋಬರ್ 1 ಮತ್ತು ಎರಡನೇ ಹಂತ 2027ರ ಮಾರ್ಚ್ 1 ರಂದು ನಡೆಯಲಿದೆ ಎಂದು ಕೇಂದ್ರ ಗೃಹ ಸಚಿವಾಲಯ ಇಂದು ಅಧಿಕೃತ ಅಧಿಸೂಚನೆ ಬಿಡುಗಡೆ ಮಾಡಿದೆ.

ಕೇಂದ್ರ ಗೃಹ ಸಚಿವ ಅಮಿತ್ ಶಾ ನಿನ್ನೆಯಷ್ಟೇ ಜನಗಣತಿ ಕುರಿತು ಕೇಂದ್ರ ಗೃಹ ಕಾರ್ಯದರ್ಶಿ, ಭಾರತೀಯ ಜನಗಣತಿ ಆಯುಕ್ತ ಹಾಗೂ ರಿಜಿಸ್ಟ್ರಾರ್ ಜನರಲ್ ಮೃತ್ಯುಂಜಯ ಕುಮಾರ್ ನಾರಾಯಣನ್ ಹಾಗೂ ಇತರ ಹಿರಿಯ ಅಧಿಕಾರಿಗಳೊಂದಿಗೆ ಪರಾಮರ್ಶೆ ನಡೆಸಿದ ಬೆನ್ನಲ್ಲೇ ಇಂದು ಕೇಂದ್ರ ಸರ್ಕಾರದಿಂದ ಅಧಿಸೂಚನೆ ಹೊರಬಿದ್ದಿದೆ.

# ಅಧಿಕಾರಿಗಳಿಗೆ ಜನಜೀವನದ ಕಾಳಜಿ ಇರಲಿ: ಜಿ ಕುಮಾರ ನಾಯಕ

ಯುವ ಮಾರ್ಗ ಸುದ್ದಿ

**ರಾಯಚೂರು,ಜೂ.16**–ಜನ ಜೀವನದ ಬಗ್ಗೆ ಅಧಿಕಾರಿಗಳಿಗೆ ಕಾಳಜಿ ಇರಬೇಕು. ಈ ನಿಟ್ಟಿನಲ್ಲಿ ಬೇರೆ ಜಿಲ್ಲೆಗಳಿಗೆ ಮಾದರಿಯಾಗುವ ಹಾಗೆ ಪ್ರತಿಯೊಂದು ಯೋಜನೆಗಳು ಅಚ್ಚುಕಟ್ಟಾಗಿ ಅನುಷ್ಠಾನಗೊಳಿಸಲು ಮುತುವರ್ಜಿ ವಹಿಸಬೇಕು ಎಂದು ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿಯ ಅಧ್ಯಕ್ಷರು ಆಗಿರುವ ರಾಯಚೂರ ಲೋಕಸಭಾ ಸದಸ್ಯರಾದ ಜಿ ಕುಮಾರ ನಾಯಕ ಅವರು ಅಧಿಕಾರಿಗಳಿಗೆ ಸಲಹೆ ಮಾಡಿದರು.

ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ (ದಿಶಾ) ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಚಿಕಿತ್ಸೆ ಸಿಗುತ್ತಿಲ್ಲ ಅನ್ನುವ ಕಾರಣಕ್ಕೆ ಜಿಲ್ಲೆಯ ಯಾವುದೇ ಕಡೆಗಳಲ್ಲಿ ಗರ್ಭಿಣಿಯರು ಸಾವಿಗೀಡಾಗುವ ಪ್ರಕರಣಗಳು ವರದಿಯಾಗಬಾರದು. ಈ ಬಗ್ಗೆ ಆರೋಗ್ಯ ಇಲಾಖೆಯ ಅಧಿಕಾರಿಗಳು ಸಾಕಷ್ಟು ಮುಂಜಾಗ್ರತೆ ವಹಿಸಬೇಕು. ಜಿಲ್ಲಾ, ತಾಲೂಕು, ಹೋಬಳಿ, ಗ್ರಾಮಮಟ್ಟದ ಎಲ್ಲ ಕಡೆಗಳಲ್ಲಿ ಮಹಿಳೆಯರು ಮತ್ತು ಮಕ್ಕಳಿಗೆ ಸಕಾಲಕ್ಕೆ ಚಿಕಿತ್ಸೆ ಸಿಗುವಂತೆ ನೋಡಿಕೊಳ್ಳಬೇಕು ಎಂದು ಸಂಸದರು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು. ಶಿಶುಮರಣ ಮತ್ತು ತಾಯಿಮರಣ ಪ್ರಮಾಣವು ಶೂನ್ಯಕ್ಕಿಳಿಸಬೇಕು ಎಂದರು.

ಬಾಲ್ಯವಿವಾಹ ಪದ್ಧತಿಯು ನಿಷೇಧವಿದ್ದರೂ ಇನ್ನು ಗ್ರಾಮೀಣ ಭಾಗದ ಅಲ್ಲಲ್ಲಿ ಬಾಲ್ಯ ವಿವಾಹ ಪ್ರಕರಣಗಳು ವರದಿಯಾಗುತ್ತಿವೆ. ಕಾನೂನುಕ್ರಮಗಳನ್ನು ಬಿಗಿಗೊಳಿಸಿ ಈ ಪದ್ಧತಿಯನ್ನು ತೊಲಗಿ ಸಬೇಕು. ಇದಕ್ಕೆ ಪ್ರೋತ್ಸಾಹಿಸುವವರನ್ನು ಕಠಿಣ ಶಿಕ್ಷೆಗೊಳಪಡಿ ಸಬೇಕು ಎಂದು ಸಂಸದರು ಸೂಚನೆ ನೀಡಿದರು.

ಗ್ರಾಮೀಣ ಭಾಗದಲ್ಲಿ ಇತ್ತೀಚೆಗೆ ಸಾರ್ವಜನಿಕರಲ್ಲಿ ಅಧಿಕ ರಕ್ತದೊತ್ತಡ, ಶುಗರ್ ಹೆಚ್ಚುತ್ತಿವೆ. ಈ ಬಗ್ಗೆ ಗ್ರಾಮಮಟ್ಟದ ವೈದ್ಯಾಧಿಕಾರಿಗಳು ಗಮನ ಹರಿಸಬೇಕು. ಗ್ರಾಮೀಣ ಜನರಲ್ಲಿ ಹೆಚ್ಚುತ್ತಿರುವ ಬಿಪಿ, ಶುಗರ್ ತಡೆಗಾಗಿ ಇದುವರೆಗೆ ಆರೋಗ್ಯ ಇಲಾಖೆ ಕೈಗೊಂಡ ಕ್ರಮದ ಬಗ್ಗೆ ವರದಿ ನೀಡಬೇಕು ಎಂದು ಸಂಸದರು ಆರೋಗ್ಯ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲೆಯ ವಿವಿಧ ಆಸ್ಪತ್ರೆಗಳಲ್ಲಿ ಖಾಲಿ ಇರುವ ತಜ್ಞ ವೈದ್ಯರ ಹುದ್ದೆಗಳನ್ನು ಕೂಡಲೇ ಭರ್ತಿ ಮಾಡಬೇಕು. ಎಂಬಿಬಿಎಸ್ ಪದವೀಧರರು ಖಾಲಿ ಇರುವ ಹುದ್ದೆಗಳಿಗೆ ಬಾರದಿರಲು ಇರುವ ತೊಡಕುಗಳನ್ನು ಕೂಡಲೇ ಸರಿಪಡಿಸಲು ಕ್ರಮ ವಹಿಸಬೇಕು. ಜನತೆಗೆ ಸರಿಯಾದ ಚಿಕಿತ್ಸೆ ಸಿಗುವ ನಿಟ್ಟಿನಲ್ಲಿ ಎಲ್ಲಾ ಆಸ್ಪತ್ರೆಗಳಲ್ಲಿ ಸಮರ್ಪಕ ಪ್ರಮಾಣದಲ್ಲಿ ಔಷಧಿ, ಸಲಕರಣೆಗಳು ಇರುವಂತೆ ನೋಡಿಕೊಳ್ಳಬೇಕು ಎಂದು ಸಂಸದರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

**ಮಣ್ಣು ಪರೀಕ್ಷೆಗೆ ಒತ್ತು ಕೊಡಿ:** ಮಾಹಿತಿ ಕೊರತೆಯಿಂದಾಗಿ ರೈತರಿಗೆ ಯಾವ ಮಣ್ಣಿನಲ್ಲಿ ಯಾವ ಬಗೆಯ ಬಿತ್ತನೆ ಬೀಜ ಬಿತ್ತನೆ ಮಾಡಬೇಕು ಎಂಬುದು ತಿಳಿಯುವುದಿಲ್ಲ. ರಾಯಚೂರ ಜಿಲ್ಲೆಯಲ್ಲಿ ಕೃಷಿ ಇಲಾಖೆ ಮತ್ತು ರೈತರ ಮಧ್ಯೆ ಸರಿಯಾದ ಸಮನ್ವಯ ಇಲ್ಲದ್ದಕ್ಕೆ ರೈತರು ಖಾಸಗಿ ಕೇಂದ್ರಗಳತ್ತ ಮುಖ ಮಾಡುವಂತಾಗಿದೆ. ಇದು ತಪ್ಪಬೇಕು. ಕೃಷಿ ಅಧಿಕಾರಿಗಳು ರೈತರ ಬಳಿ ಹೋಗಬೇಕು. ಬಿತ್ತನೆ ಬೀಜ, ರಸಗೊಬ್ಬರದ ಬಗ್ಗೆ ರೈತರಿಗೆ ಸರಿಯಾದ ಮಾಹಿತಿ ನೀಡಬೇಕು. ಮಣ್ಣಿನ




ಪರೀಕ್ಷೆಯನ್ನು ನಿಯಮಿತವಾಗಿ ನಡೆಸಬೇಕು ಎಂದು ಸಂಸದರು ಕೃಷಿ ಇಲಾಖೆ ಯ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

**ತಳಿಗಳ ಬಗ್ಗೆ ತಿಳಿವಳಿಕೆ ನೀಡಿ:** ತೋಟಗಾರಿಕಾ ಬೆಳೆಗಳ ವಿವಿಧ ತಳಿಗಳ ಬಗ್ಗೆ ರೈತರಿಗೆ ಮಾಹಿತಿ ನೀಡುತ್ತಿಲ್ಲ. ಇದುವರೆಗೆ ಬಹುತೇಕ ರೈತರಿಗೆ ಇಲಾಖೆಯಿಂದ ಸಹಾಯಧನ ಸಮರ್ಪಕವಾಗಿ ತಲುಪಿಲ್ಲ ಎಂದು ಸಂಸದರು ತೋಟಗಾರಿಕಾ ಇಲಾಖೆಯ ಅಧಿಕಾರಿಗಳ ಕಾರ್ಯವೈಖರಿಯ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದರು. ಮಾವಿನ ಹಣ್ಣಿನ ಉತ್ಪಾದನಾ ಪ್ರಮಾಣವು ರಾಯಚೂರ ಜಿಲ್ಲೆಯಲ್ಲೆ ಏಕೆ ಕಡಿಮೆ ಆಗಿದೆ ಎಂದು ಪ್ರಶ್ನಿಸಿದ ಸಂಸದರು, ಜಿಲ್ಲೆಯಲ್ಲಿನ ಮಾವು ಬೆಳೆಗಾರರನ್ನು ಗುರುತಿಸಬೇಕು. ಇಲ್ಲಿ ಬೆಳೆದ ಮಾವನ್ನು ಬೇರೆ ರಾಜ್ಯಗಳಿಗೆ ಸಾಗಿಸಲು ಪೂರಕವಾದ ರಸ್ತೆ ಸೌಕರ್ಯ ಜಿಲ್ಲೆಯಲ್ಲಿದೆ ಎಂದು ತಿಳಿಸಿ ಅವರಿಗೆ ಪ್ರೋತ್ಸಾಹ ನೀಡುವ ಕಾರ್ಯ ಮಾಡಬೇಕು ಎಂದು ನಿರ್ದೇಶನ ನೀಡಿದರು.


**ರೈತರಿಗೆ ಸ್ಪಂದಿಸಿ:** ಈಗ ಜಿಲ್ಲೆಯ ಎಲ್ಲಾ ಕಡೆಗಳಲ್ಲಿ ಮಳೆ ಸುರಿದಿದೆ. ಹೀಗಾಗಿ ರೈತರಿಗೆ ಸಕಾಲಕ್ಕೆ ಬಿತ್ತನೆಗೆ ಅನುಕೂಲವಾಗುವಂತೆ ಬಿತ್ತನೆ ಬೀಜ ಮತ್ತು ರಸಗೊಬ್ಬರ ಸಿಗುವಂತೆ ಕೃಷಿ ಇಲಾಖೆಯ ಅಧಿಕಾರಿಗಳು ಸಿದ್ಧತೆ ಮಾಡಿಕೊಳ್ಳಬೇಕು. ರಸಗೊಬ್ಬರ ಕೊರತೆ ಏನಾದರು ಕಂಡು ಬಂದಲ್ಲಿ ಈ ಬಗ್ಗೆ ವರದಿ ಮಾಡಬೇಕು ಎಂದು ಸಚಿವರಾದ ಎನ್.ಎಸ್.ಬೋಸರಾಜು ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

## ಸಮಾಜಕ್ಕೆ ಜ್ಞಾನಮಿತ್ರ ಅವರ ಸೇವಾ ಕಾರ್ಯ ಶ್ಲಾಘನೀಯ – ಬ್ರಿಜೇಶ್ ಪಾಟೀಲ್

ಯುವ ಮಾರ್ಗ ಸುದ್ದಿ

**ಸಿರವಾರ, ಜೂ.16**– ರಾಯಚೂರು ನಗರದಲ್ಲಿ ಮುನ್ನೂರು ಕಾಪು ಸಮಾಜದಿಂದ ಆಯೋಜಿಸಿದ್ದ ಮುಂಗಾರು ಸಾಂಸ್ಕೃತಿಕ ಹಬ್ಬದ 25ನೇ ವರ್ಷದ ಬೆಳ್ಳಿ ಮಹೋತ್ಸವದಲ್ಲಿ ಮುಂಗಾರು ಸಿರಿ ಸಂಪದ ಪ್ರಶಸ್ತಿ ಪುರಸ್ಕೃತರಾದ ಸಿರವಾರ ಪಟ್ಟಣದ ಸಮಾಜ ಸೇವಕ ಹಾಗೂ ಸಂಜೀವಿನಿ ಟ್ರಸ್ಟ್ ಅಧ್ಯಕ್ಷರಾದ ಜ್ಞಾನಮಿತ್ರ ಅವರಿಗೆ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಬ್ರಿಜೇಶ್ ಪಾಟೀಲ್, ಹೇಮರೆಡ್ಡಿ ಮಲ್ಲಮ್ಮ ಸೌಹಾರ್ದ ಸಹಕಾರಿ ಸಂಘದ ಅಧ್ಯಕ್ಷರಾದ ಅಯ್ಯನಗೌಡ ಎರಡ್ಡಿ ಅವರು ಸನ್ಮಾನಿಸಿ ಗೌರವಿಸಿದರು.

ಈ ವೇಳೆ ಮಾತನಾಡಿದ ಪಂಚ ಗ್ಯಾರಂಟಿ ಯೋಜನೆಗಳ ಅಧ್ಯಕ್ಷರಾದ ಬ್ರಿಜೇಶ್ ಪಾಟೀಲ್ ಅವರು ಜ್ಞಾನಮಿತ್ರ ಅವರು ಅನೇಕ ವರ್ಷಗಳಿಂದ ಸಮಾಜ ಸೇವೆಯಲ್ಲಿ ತೊಡಗಿಕೊಂಡು ಈ ಭಾಗದ ಜನರಿಗೆ ಸಂಜೀವಿನಿಯಾಗಿದ್ದಾರೆ ಉಚಿತ ಅಂಬುಲೆನ್ಸ್ ಸೇವೆ, ಸಾಮೂಹಿಕ ವಿವಾಹಗಳು, ಆರೋಗ್ಯ ಶಿಬಿರಗಳಂತ ಬಡ ಜನರಿಗೆ ಅವಶ್ಯವಾಗಿರುವ ಸಾಮಾಜಿಕ ಕಾರ್ಯಗಳಲ್ಲಿ ತೊಡಗಿಸಿಕೊಂಡಿದ್ದಾರೆ ಜ್ಞಾನಮಿತ್ರ ಅವರಿಗೆ ಇಂತಹ ಎಷ್ಟು ಪ್ರಶಸ್ತಿಗಳು ಕೊಟ್ಟರೂ ಕಡಿಮೆಯೇ ಅದು ರಾಯಚೂರು ಮೂನ್ನೂರು ಕಾಪು ಸಮಾಜ ಇವರನ್ನು ಗುರುತಿಸಿ ಪ್ರಶಸ್ತಿ ನೀಡಿದ್ದು ಅರ್ಥಪೂರ್ಣವಾಗಿದೆ ಎಂದರು.



ನಂತರ ಅಯ್ಯನಗೌಡ ಎರಡ್ಡಿ ಅವರು ಮಾತನಾಡಿ ಕಳೆದ ಎರಡು–ಮೂರು ದಶಕಗಳಿಂದ ಅನೇಕ ಸಾಮಾಜಿಕ ಕಾರ್ಯಗಳ ಮಾಡುತ್ತಾ ಜನ ಸೇವೆಯೇ ಜನಾರ್ದನ ಸೇವೆ ಎಂದು ಶ್ರಮಿಸುತ್ತಿರುವ ಸಂಜೀವಿನಿ ಟ್ರಸ್ಟ್ ಅಧ್ಯಕ್ಷರಾದ ಜ್ಞಾನಮಿತ್ರ ಅವರಿಗೆ ರಾಯಚೂರು ಮೂನ್ನೂರು ಕಾಪು ಸಮಾಜ ಗುರುತಿಸಿ ಮುಂಗಾರು ಸಂಪದ ಪ್ರಶಸ್ತಿ ನೀಡಿರುವುದು ಸಂತಸ ತಂದಿದೆ ಎಂದರು. ಈ ಸಂದರ್ಭದಲ್ಲಿ ಗಡ್ಲ ಬಸವರಾಜ ನಾಯಕ, ಸೂರಿ ದುರುಗಣ್ಣ ನಾಯಕ, ನಾಗೋಲಿ ಚನ್ನಪ್ಪ ಸಾಹುಕಾರ್, ಲಕ್ಷ್ಮೀಕಾಂತ, ಗಡ್ಲ ಚನ್ನಪ್ಪ ನಾಯಕ, ನಾಗಪ್ಪ ನವಲಕಲ್, ಶಾಂತಪ್ಪ ದೊಡ್ಡಮನಿ, ಗಡ್ಲ ಚನ್ನಪ್ಪ ನಾಯಕ, ಅಕ್ಬರ್, ಅಪ್ಸಾರ್, ಅಮರನಾಥ ಸೇರಿ ಅನೇಕರಿದ್ದರು.

Owned, Printed and published by **ANILKUMAR H** from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at **MAA FRIENDS PRINTING PRESS,** Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: **ANILKUMAR H**